ಬುಧವಾರ,04.03.2026
ಬೆಂಗಳೂರು, ಬೆಲೆ: 5ರೂ,2 ಪುಟಗಳು
ಸಂಪುಟ 01 – ಸಂಚಿಕೆ 159

Digital Varthe Kannada Daily
Volume 01 - Issue 159
Wednesday 04.03.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

ಸಿಸಿಬಿ ಪೊಲೀಸರ ಮೆಗಾ ರೇಡ್:ಅಪಾರ್ಟ್‌ಮೆಂಟ್‌ನಲ್ಲಿ 10 ಕೋಟಿ ರೂ. ಮೌಲ್ಯದ ಡ್ರಗ್ಸ್ ಸೀಜ್



ಸೀಜ್ ಮಾಡಲಾದ ಡ್ರಗ್

ಬೆಂಗಳೂರು: ನಗರದಲ್ಲಿ ಡ್ರಗ್ಸ್ ಜಾಲವನ್ನು ಬೇರುಸಹಿತ ಉಖಿಳಿ ಹಾಕಲು ಮುಂದಾಗಿರುವ ಬೆಂಗಳೂರು ಪೊಲೀಸರು ಮತ್ತೊಮ್ಮೆ ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಅಂತರರಾಜ್ಯ ಮಾದಕ ವಸ್ತು ದಂಧೆಗೆ ದೊಡ್ಡ ಹೊಡೆತ ನೀಡಿದ್ದಾರೆ. ನಗರದ ಪ್ರತಿಷ್ಠಿತ ಅಪಾರ್ಟ್‌ಮೆಂಟಂದರಲ್ಲಿ ಸಿಸಿಬಿ ನಾರ್ಕೋಟಿಕ್ಸ್ ವಿಭಾಗ ನಡೆಸಿದ ದಾಳಿ ವೇಳೆ ಬರೋಬ್ಬರಿ 10 ಕೋಟಿ ರೂಪಾಯಿ ಮೌಲ್ಯದ ವಿವಿಧ ಮಾದಕ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ. ಪ್ರಕರಣ ಸಂಬಂಧ ಇಬ್ಬರು ಆರೋಪಿಗಳನ್ನು ಬಂಧಿಸ ಲಾಗಿದ್ದು, ಈ ಕಾರ್ಯಾಚರಣೆ ನಗರದಲ್ಲಿ ಡ್ರಗ್ಸ್ ಜಾಲದ ವ್ಯಾಪ್ತಿಯನ್ನು ಬಹಿರಂಗಪಡಿಸಿದೆ.

ಬಂಧಿತ ಆರೋಪಿಗಳನ್ನು ಕೇರಳ ಮೂಲದ ಅಶ್ವಿನ್ (27) ಮತ್ತು ಮೊಬಿನಾ (25) ಎಂದು ಗುರುತಿಸಲಾಗಿದೆ. ಇವರ ಬಳಿಯಿಂದ ಎಲ್‌ಎಸ್‌ಡಿ (ಐಖಿಳ) ಸ್ಟ್ರಿಪ್‌ಗಳು, ಹೈಡ್ರೋ ಗಾಂಜಾ ಹಾಗೂ ಚರಸ್ ಸೇರಿದಂತೆ ಹಲವು ಮಾದಕ ವಸ್ತುಗಳನ್ನು ಜಪ್ತಿ ಮಾಡಲಾಗಿದೆ. ವಿಶೇಷವಾಗಿ, ಕರ್ನಾಟಕದಲ್ಲಿ ಮೊದಲ ಬಾರಿಗೆ ಎಲ್-ಎಸ್‌ಡಿ ಸ್ಟ್ರಿಪ್‌ಗಳನ್ನು ವಶಪಡಿಸಿಕೊಂಡಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಈ ಬೆಳವಣಿಗೆ ರಾಜ್ಯದಲ್ಲಿ ಸಿಂಥೆಟಿಕ್ ಡ್ರಗ್ಸ್ ವಿತರಣೆಯ ಹೊಸ ಮಾದರಿಯ ಬಗ್ಗೆ ಆತಂಕವನ್ನು ಹೆಚ್ಚಿ ಸಿದೆ. ಡ್ರಗ್ಸ್ ಮಾರಾಟಕ್ಕೆ ಆರೋ ಪಿಗಳು ರೂಪಿಸಿದ್ದ ವಿತರ್ನಾಕ್ ಪ್ಲಾನ್ ಕೂಡ ಬೆಳಕಿಗೆ ಬಂದಿದೆ. ದೇವರ ಚಿತ್ರಗಳು ಹಾಗೂ ವಿವಿಧ ಆಕರ್ಷಕ ಚಿತ್ರಕಲಾ ವಿನ್ಯಾಸಗಳಲ್ಲಿ ಎಲ್‌ಎಸ್‌ಡಿ ಸ್ಟ್ರಿಪ್‌ಗಳನ್ನು ಮುದ್ರಿಸಿ, ಯಾರಿಗೂ ಅನುಮಾನ ಬಾರದಂತೆ ಮಾರಾಟ ಮಾಡುತ್ತಿದ್ದರು ಎನ್ನಲಾಗಿದೆ. ಬಂಧಿತ ಇಬ್ಬರೂ ಡ್ರಗ್ಸ್ ಪೆಡ್ಲಿಂಗ್‌ನ್ನೇ ವೃತ್ತಿಯಾಗಿ ಮಾಡಿಕೊಂಡಿದ್ದು, ನಿಯಮಿ ತವಾಗಿ ಡ್ರಗ್ಸ್ ವಿತರಣೆ ನಡೆಸು ತ್ತಿದ್ದರು ಎಂದು ತನಿಖೆಯಲ್ಲಿ ಬಹಿರಂ ಗವಾಗಿದೆ.

ಇವರಿಗೆ 'ವಿನ್ಸೆಂಟ್' ಎಂಬಾತ ಥಾಯ್ ಲ್ಯಾಂಡ್‌ನಿಂದ ಡ್ರಗ್ಸ್ ಕಳುಹಿ ಸುತ್ತಿದ್ದನು ಎನ್ನಲಾಗಿದೆ. ವಿಮಾನ ಮಾರ್ಗದ ಮೂಲಕ ಅಲ್ಪ ಪ್ರಮಾಣಗಳಲ್ಲಿ ಮಾದಕ ವಸ್ತುಗಳನ್ನು ರವಾನಿಸಿ, ಅನುಮಾನಕ್ಕೆ ಆಸ್ಪದ ಸಿಗದಂತೆ ಜಾಲ ಬಿಚ್ಚಲಾಗುತ್ತಿತ್ತು. ವಿನ್ಸೆಂಟ್ ಸೂಚಿಸಿದ ಸ್ಥಳಗಳಲ್ಲಿ ಅಶ್ವಿನ್ ಮತ್ತು ಮೊಬಿನಾ ಡ್ರಗ್ಸ್ ಸಂಗ್ರಹಿಸಿ ನಂತರ ವಿತರಣೆ ಮಾಡುತ್ತಿದ್ದರು ಎಂದು ಸಿಸಿಬಿ ಮೂಲಗಳು ತಿಳಿಸಿವೆ. ಪ್ರಕರಣದಲ್ಲಿ ಬಳಸಲಾಗಿದ್ದ ಫ್ಲಾಟ್ ಮಾಲೀಕನ ಪಾತ್ರದ ಕುರಿತಾಗಿಯೂ ಅಧಿಕಾರಿಗಳು ಪರಿಶೀಲನೆ ಮುಂದುವರಿಸಿದ್ದಾರೆ.

ಇದೇ ವೇಳೆ, ನಗರದಲ್ಲಿ ಮತ್ತೊಂದು ಪ್ರತ್ಯೇಕ ಕಾರ್ಯಾಚರಣೆ ನಡೆಸಿದ ವೈಟ್‌ಫೀಲ್ಡ್ ಪೊಲೀಸರು ವಿದ್ಯಾರ್ಥಿಗಳು ಹಾಗೂ ಐಟಿ-ಬಿಟಿ ಉದ್ಯೋಗಿಗಳನ್ನು ಗುರಿಯಾಗಿಸಿಕೊಂಡಿದ್ದ ಡ್ರಗ್ ಪೆಡ್ಲರ್‌ನ್ನು ಬಂಧಿಸಿದ್ದಾರೆ. ಒಡಿಶಾ ಮೂಲದ ಲಿಂಗರಾಜ್ ದಾಸ್ ಬಂಧಿತನಾಗಿದ್ದು, ಈತನಿಂದ ಸುಮಾರು 55 ಲಕ್ಷ ರೂಪಾಯಿ ಮೌಲ್ಯದ 27 ಕೆಜಿ ಗಾಂಜಾ ಹಾಗೂ 3 ಕೆಜಿ 200 ಗ್ರಾಂ ಆಶಿಸ್ ಆಯಿಲ್ ಜಪ್ತಿ ಮಾಡಲಾಗಿದೆ. ಯುವಕರನ್ನು ಗುರಿಯಾಗಿಸಿಕೊಂಡು ಡ್ರಗ್ಸ್ ಮಾರಾಟ ಮಾಡುತ್ತಿದ್ದ ಜಾಲದ ಬಗ್ಗೆ ಹೆಚ್ಚಿನ ತನಿಖೆ ನಡೆಯುತ್ತಿದೆ.

ನಗರದಲ್ಲಿ ಹೆಚ್ಚುತ್ತಿರುವ ಡ್ರಗ್ಸ್ ಜಾಲವನ್ನು ನಿಯಂತ್ರಿಸಲು ಪೊಲೀಸರು ತೀವ್ರ ಕಾರ್ಯಾಚರಣೆ ಮುಂದುವರಿಸಿದ್ದು, ಮಾದಕ ವಸ್ತುಗಳ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿ ಅನುಸರಿಸಲಾಗುತ್ತಿದೆ. ಬಂಧಿತರಿಂದ ದೊರೆತ ಮಾಹಿತಿಯ ಆಧಾರದಲ್ಲಿ ಇನ್ನಷ್ಟು ಬಂಧನಗಳ ಸಾಧ್ಯತೆ ಇರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಮಂಚದ ಮೇಲೆಯೇ ಬಿತ್ತು ಹೆಣ

ಚಿಕ್ಕಬಳ್ಳಾಪುರ: ನಗರದ ಶಾಂತಿನಗರ ಬಡಾವಣೆ ನಿವಾಸಿ ತೇಜಸ್ವಿನಿಗೆ ಇನ್ನು 30 ವರ್ಷ ವಯಸ್ಸು. ತಂದೆ-ತಾಯಿಗೆ ಒಬ್ಬಳೇ ಹೆಣ್ಣು ಮಗಳು. ಮನೆಯಲ್ಲಿ ಬಡತನವಿದ್ದರೂ ಈಕೆಗೇನು ಕೊರತೆ ಇರಲಿಲ್ಲ. ಗಂಡ ಮಕ್ಕಳ ಜೊತೆ ಸುಖವಾಗಿರಬೇಕಿದ್ದ ಈಕೆ ಏನೇನೋ ಮಾಡಲು ಹೋಗಿ ಕೊನೆಗೆ ಹೆಣವಾಗಿದ್ದಾಳೆ. ತೇಜಸ್ವಿನಿ 20ನೇ ವಯಸ್ಸಿನಲ್ಲೇ ಓಡಿ ಹೋಗಿ ಲವ್ ಮ್ಯಾರೇಜ್ ಆಗಿದ್ದಳು. ಒಂದು ಮಗು ಆದ ಬಳಿಕ ಕುಟುಂಬ ಕಲಹ ಉಂಟಾಗಿ ಆತನನ್ನು ದೂರ ಮಾಡಿ ಮತ್ತೊಬ್ಬನ ಜೊತೆ ಓಡಿ ಹೋಗಿ ಮದ್ವೆಯಾಗಿದ್ದಳು. ಆಗ ಮತ್ತೊಂದು ಮಗುವಾದ ಬಳಿಕ ಆತನಿಂದ ದೂರವಾಗಿ ಮಕ್ಕಳೊಂದಿಗೆ ಪ್ರತ್ಯೇಕವಾಸವಾಗಿದ್ದಳು. ಇದೇ ಸಂದರ್ಭದಲ್ಲಿ ಸಂದೀಪ್ ಎನ್ನುವ ಯುವಕನನ್ನು ಬುಟ್ಟಿಗೆ ಹಾಕಿಕೊಂಡು ಆತನೊಂದಿಗೆ ಲಿವಿಂಗ್ ರಿಲೇಶನ್ ಶಿಪ್‌ನಲ್ಲಿದ್ದಳು. ಇದಾಗಿ ಸ್ವಲ್ಪ ದಿನದಲ್ಲೇ ಬರ್ಬರವಾಗಿ ಹತ್ಯೆಯಾಗಿದ್ದಾಳೆ.

ಇಬ್ಬರನ್ನು ಮದುವೆಯಾಗಿದ್ದ ತೇಜಸ್ವಿನಿ: ತೇಜಸ್ವಿನಿಗೆ 20 ವರ್ಷ ತುಂಬುತ್ತಿದ್ದಂತೆ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಸೀಕಲ್ ಗ್ರಾಮದ ಶ್ರೀನಿವಾಸ್ ಎನ್ನುವಾತನನ್ನು ಪ್ರೀತಿಸಿ, ಮನೆಯಲ್ಲಿ ಹೇಳದೇ, ಕೇಳದೇ ಆತನಿಂದೆ ಹೋಗಿದ್ದಳು. ಆತನನ್ನೇ ಮದುವೆ ಮಾಡಿಕೊಂಡಿದ್ದಳು. ಇಬ್ಬರಿಗೆ ಯುವರಾಜ್ ಎನ್ನುವ ಮಗ ಹುಟ್ಟಿದ್ದ. ಆದರೆ ಕುಟುಂಬ ಕಲಹ ಹಿನ್ನಲೆ ಗಂಡ ಶ್ರೀನಿವಾಸನನ್ನು ತೊರೆದು ತವರುಮನೆಯಲ್ಲಿ ನೆಲೆಸಿದ್ದಳು. ಇನ್ನು ತೇಜಸ್ವಿನಿ 8 ವರ್ಷಗಳ ಹಿಂದೆ ಗಂಡ ಶ್ರೀನಿವಾಸನನ್ನು ತೊರೆದು ತವರು ಮನೆಯಲ್ಲಿದ್ದಾಗ 5 ವರ್ಷಗಳ ಹಿಂದೆ ಚಿಕ್ಕಬಳ್ಳಾಪುರ ಜಿಲ್ಲೆ ಮಂಚೇನಹಳ್ಳಿ ತಾಲ್ಲೂಕಿನ ದಂಡಿಗಾನಹಳ್ಳಿ ಗ್ರಾಮದ ಚಂದ್ರಶೇಖರ್‌ನನ್ನು ಪ್ರೀತಿಸಿ, ಆತನಿಂದೆ ಹೋಗಿದ್ದಳು. ನಂತರ ಆತನನ್ನೇ ಮದುವೆ ಮಾಡಿಕೊಂಡಿದ್ದು, ಇಬ್ಬರಿಗೂ ಜನಿಸಿದ 3 ವರ್ಷದ ಹೆಣ್ಣು ಮಗಳಿದ್ದಾಳೆ.

ಇಬ್ಬರನ್ನೂ ಬಿಟ್ಟು ಮತ್ತೊಬ್ಬನ ಜತೆ ಲವ್ವಿಡವ್ವಿ: ಇನ್ನು ಚಂದ್ರಶೇಖರ್ ಜೊತೆ ಸಂಸಾರ ಸಾಕಾದ ಕಾರಣ ಆತನನ್ನು ತೊರೆದು, ಚಿಕ್ಕಬಳ್ಳಾಪುರದಲ್ಲಿ ವಾಸವಾಗಿದ್ದಳು. ನಗರದ ಹೋಟೆಲ್ಲಿಗಳಲ್ಲಿ ಪಾತ್ರೆ ತೊಳೆದುಕೊಂಡು ಅಲ್ಲಿ-ಇಲ್ಲಿ ಕೆಲಸ ಮಾಡಿಕೊಂಡು ಮಕ್ಕಳನ್ನು ಸಾಕಿಕೊಂಡಿದ್ದಳು. ಹೀಗೆ ಮದುವೆಯೊಂದರ ರಿಷೆಪ್ಷನಿಸ್ಟ್ ಕೆಲಸಕ್ಕೆ ಹೋಗಿದ್ದಾಗ ಸಂದೀಪ್ ಎನ್ನುವ ಯುವಕ ಪರಿಚಯವಾಗಿದ್ದು, ಪರಿಚಯ ಅಕ್ರಮ ಸಂಬಂಧಕ್ಕೆ ತಿರುಗಿತ್ತು. ಎರಡು ಗಂಡಂದಿರನ್ನು ಬಿಟ್ಟು ಇದೀಗ ಪರಿಯಚವಾದ ಸಂದೀಪ್ ನೊಂದಿಗೆ 3ನೇ ಮದುವೆಗೆ ಸನ್ನದ್ಧಳಾಗಿದ್ದಳು.

ಮಂಚದಲ್ಲಿದ್ದಾಗಲೇ ಚಾಕು ಇರಿತ: ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನ ದೊಡ್ಡತಮ್ಮನಹಳ್ಳಿ ಗ್ರಾಮದ ಸಂದೀಪ್ ಹಾಗೂ ತೇಜಸ್ವಿನಿ ಪ್ರೇಮದ ಕಡಲಲ್ಲಿ ತೇಲಾಡುತ್ತಿದ್ದು, ಕೊನೆಗೆ ಚಿಕ್ಕಬಳ್ಳಾಪುರದಲ್ಲಿ ಸಂದೀಪ್‌ನೊಂದಿಗೆ ಲಿವಿಂಗ್ ರಿಲೇಶನ್ ಶಿಪ್‌ನಲ್ಲಿದ್ದಳು. ಹೀಗಿರುವಾಗ ಫೆಬ್ರವರಿ 25 ರಂದು ಬೆಳಗ್ಗೆ 4 ಗಂಟೆ ಸಮಯದಲ್ಲಿ ಮಂಚದ ಮೇಲಿದ್ದ ಜೋಡಿಗೆ ಅದೇನಾಯ್ತೋ ಗೊತ್ತಿಲ್ಲ. ಇಬ್ಬರು ಕಿತ್ತಾಡಿಕೊಂಡಿದ್ದು, ಈ ವೇಳೆ ಸಂದೀಪ್ ತೇಜಸ್ವಿನಿಯ ಹೊಟ್ಟೆಗೆ ಚಾಕುವಿನಿಂದ ಇರಿದಿದ್ದಾನೆ. ಬಳಿ ಸಂದೀಪ್ ತಾನೇ ಆಕೆಯನ್ನು ಚಿಕ್ಕಬಳ್ಳಾಪುರದ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದ. ನಿದ್ದೆಗಣ್ಣಲ್ಲಿ ಮಂಚದ ಮೇಲಿಂದ ಕೆಳಗೆ ಬಿದ್ದಾಗ ಏನೋ ಚುಚ್ಚಿಕೊಂಡಿದೆ ಎಂದು ವೈದ್ಯರಿಗೆ ಹೇಳಿ, ಏನೂ ಗೊತ್ತಿಲ್ಲದಂತೆ ಡ್ರಾಮಾ ಮಾಡಿದ್ದ.

ಹಣ, ಎಣ್ಣೆಗಾಗಿ ಪೀಡಿಸುತ್ತಿದ್ದಳು: ಅನುಮಾನಗೊಂಡು ಮನೆಯಲ್ಲಿದ್ದ ತೇಜಸ್ವಿನಿ ಮಗನನ್ನು ವಿಚಾರಿಸಿದಾಗ ಸತ್ಯ ಬಯಲಾಗಿತ್ತು. ತಾಯಿ ಹಾಗೂ ಸಂದೀಪ್ ರಾತ್ರಿ ಜಗಳ ಮಾಡಿಕೊಂಡಿದ್ದರು. ಸಂದೀಪ್‌ನೇ ತಾಯಿಯ ಹೊಟ್ಟೆಗೆ ಚಾಕು ಚುಚ್ಚಿದ್ದಾನೆಂದು ತನ್ನ ಸಂಬಂಧಿಕರಿಗೆ ತಿಳಿಸಿದ್ದ. ಇನ್ನು ಮೃತಳ ಅಣ್ಣ ಗಿರೀಶ್ ಚಿಕ್ಕಬಳ್ಳಾಪುರ ನಗರಠಾಣೆ ಪೊಲೀಸರಿಗೆ ದೂರು ನೀಡುತ್ತಿದ್ದಂತೆ ಪೊಲೀಸರು ಆರೋಪಿ ಸಂದೀಪ್‌ನನ್ನು ಬಂಧಿಸಿ ವಿಚಾರಣೆ ನಡೆಸಿದ್ದು, ಈ ವೇಳೆ ಆರೋಪಿ ಮಾಡಿದ ತಪ್ಪನ್ನು ಒಪ್ಪಿಕೊಂಡಿದ್ದು, ಪ್ರಿಯತಮೆ ತೇಜಸ್ವಿನಿ ತನ್ನನ್ನು ಮದುವೆ ಮಾಡಿಕೊಳ್ಳುವಂತೆ ಹಾಗೂ ಹಣ, ಎಣ್ಣೆಗಾಗಿ ಪೀಡಿಸುತ್ತಿದ್ದಳು. ಇದರಿಂದ ಹತಾಶನಾಗಿ ಚಾಕುವಿನಿಂದ ಚುಚ್ಚಿದ್ದಾಗಿ ಒಪ್ಪಿಕೊಂಡಿದ್ದಾನೆ.

ಹೀಗೆ ಇಬ್ಬರು ಗಂಡಂದಿರನ್ನು ಬಿಟ್ಟು ಮತ್ತೊಬ್ಬನ ಜತೆ ಸೇರಿ ತೇಜಸ್ವಿನಿ ಹತ್ಯೆಯಾಗಿದ್ದು, ಮತ್ತೊಂದೆಡೆ ತಮ್ಮದಲ್ಲದ ತಪ್ಪಿಗೆ ತೇಜಸ್ವಿನಿಯ ಹತ್ಯೆಯಾಗಿದ್ದು, ಮತ್ತೊಂದೆಡೆ ತಮ್ಮದಲ್ಲದ ತಪ್ಪಿಗೆ ತೇಜಸ್ವಿನಿಯ ಚಿಕ್ಕಮಕ್ಕಳು ಅನಾಥವಾಗಿವೆ.

ರೈಲ್ವೆ ಸ್ಟೇಷನ್ ವೃತ್ತಕ್ಕೆ ಸಿಗ್ನಲ್ ದೀಪ, ಸಿಸಿಟಿವಿಗೆ ಚಾಲನೆ

ದೊಡ್ಡಬಳ್ಳಾಪುರ: ಟ್ರಾಫಿಕ್ ಪೊಲೀಸ್ ಸ್ಟೇಷನ್ ಗೆ ಪ್ರಸ್ತಾವನೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಹೇಳಿಕೆ.

ದೊಡ್ಡಬಳ್ಳಾಪುರ ಮತ್ತು ಚಂದಾಪುರಕ್ಕೆ ಶೀಘ್ರವಾಗಿ ಟ್ರಾಫಿಲ್ ಪೊಲೀಸ್ ಸ್ಟೇಷನ್ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ತಿಳಿಸಿದರು.

ನಗರದ ರೈಲ್ವೆ ನಿಲ್ದಾಣದಲ್ಲಿ ಸೋಮವಾರ ಅಸ್ಟಿಮೋ ಫೈ ಪ್ರೈವೆಟ್ ಲಿಮಿಟೆಡ್ ಕಂಪನಿಯ ಸಿಎಸ್‌ಆರ್ ನಿಧಿಯಡಿ ಪೊಲೀಸ್ ಇಲಾಖೆ ವತಿಯಿಂದ ಸಿಗ್ನಲ್ ದೀಪ ಮತ್ತು ಅತ್ಯಾಧುನಿಕ ಸಿಸಿಟಿವಿಗೆ ಚಾಲನೆ ನೀಡಿದ ಬಳಿಕ ಅವರು ಮಾತನಾಡಿದರು.

ಸಿಗ್ನಲ್ ದೀಪ ಮತ್ತು ಸಿಸಿಟಿವಿಯ ಅಳವಡಿಕೆಯಿಂದ ಟ್ರಾಫಿಕ್ ನಿರ್ವಹಣೆಗೆ ಅನುಕೂಲವಾಗುತ್ತದೆ. ಈ ಭಾಗದಲ್ಲಿ ಅಪಘಾತಗಳು, ಹಿಟ್ ಅಂಡ್ ರನ್ ಸಂಖ್ಯೆ ಅಧಿಕವಾಗಿತ್ತು ಈ ಸಿಸಿಟಿವಿಗಳಿಂದ ಅಪಘಾತ ಪ್ರಕರಣಗಳ ಪತ್ತೆಗೂ ಸಹಕರಿಯಾಗಲಿದೆ. ಮುಂದಿನ ದಿನಗಳಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಪ್ರಮುಖ ವೃತ್ತ, ಪ್ರದೇಶಗಳಲ್ಲಿ ಸಿಸಿಟಿವಿ ಅಳವಡಿಕೆಗೆ ಕ್ರಮವಹಿಸಲಾಗಿದೆ. ಎಂದರು.

ನಗರಸಭಾ ಉಪಾಧ್ಯಕ್ಷ ಮಲ್ಲೇಶ್ ಮಾತನಾಡಿ ಇಲ್ಲಿನ ಜನರ ಬೇಡಿಕೆ ಮತ್ತು ಪೊಲೀಸ್ ಇಲಾಖೆಯ ಸಹಭಾಗಿತ್ವದಲ್ಲಿ ಉತ್ತಮವಾಗಿ ನಿರ್ವಹಣೆ ಮಾಡಲಾಗುವುದು ಎಂದರು.

ದೊಡ್ಡಬಳ್ಳಾಪುರದ ರೈಲ್ವೆ ನಿಲ್ದಾಣದಲ್ಲಿ ಸಿಗ್ನಲ್ ದೀಪ, ಸಿಸಿಟಿವಿಗೆ ಎಸ್.ಪಿ ಚಂದ್ರಕಾಂತ್ ಚಾಲನೆ ನೀಡಿದರು.

ಡಿವೈಎಸ್ಪಿ ಪಾಂಡುರಂಗ, ನಗರಸಭೆ ಅಧ್ಯಕ್ಷೆ ಸುಮಿತ್ರಾ, ಉಪಾಧ್ಯಕ್ಷ ಮಲ್ಲೇಶ್, ಅಸ್ಟಿಮೋ ಫೈ ಪ್ರೈವೆಟ್ ಲಿಮಿಟೆಡ್ ಕಂಪನಿಯ ಪ್ಲಾಂಟ್ ಜನರಲ್ ವಿನಾಯಕ ಹೆಗಡೆ, ಸಿನಿಯರ್ ಮ್ಯಾನೇಜರ್ ಪ್ರಕಾಶ್, ಮ್ಯಾನೇಜರ್ ಪ್ರದೀಪ, ಎಚ್.ಆರ್ ಮನೋಹರ್, ಇನ್ಸ್‌ಪೆಕ್ಟರ್ ಗಳಾದ ಅಮರೇಶ್ ಗೌಡ, ಕಲ್ಲಪ್ಪ ಇದ್ದರು.

ಬೆಂಗಳೂರಿಗೆ ಮೂವರು ಶುಚಿತ್ವ ರಾಯಭಾರಿಗಳು

ಬೆಂಗಳೂರು: ನಗರದಲ್ಲಿ ಹೆಚ್ಚುತ್ತಿರುವ ಘನತ್ಯಾಜ್ಯ ಸಮಸ್ಯೆಗೆ ಸಮಗ್ರ ಪರಿಹಾರ ಕಂಡುಹಿಡಿಯುವ ನಿಟ್ಟಿನಲ್ಲಿ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಸಂಸ್ಥೆ ಮಹತ್ವದ ಹೆಜ್ಜೆ ಇಟ್ಟಿದೆ. ಸ್ವಚ್ಛ ಸರ್ವೇಕ್ಷಣ್ ಅಭಿಯಾನದ ಅಂಗ ವಾಗಿ ನಾಗರಿಕರಲ್ಲಿ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸಲು ಮೂವರು ಗಣ್ಯರನ್ನು ಶುಚಿತ್ವ ರಾಯಭಾರಿಗಳಾಗಿ ನೇಮಕ ಮಾಡಲಾಗಿದೆ. ಪದ್ಮಶ್ರೀ ಪುರಸ್ಕೃತರಾದ ಮಂಜಮ್ಮ ಜೋಗತಿ, ಚಲನಚಿತ್ರ ನಟ ಅನಿರುದ್ಧ ಜಟ್ಕರ್ ಹಾಗೂ ಸಾಮಾಜಿಕ ಕಾರ್ಯಕರ್ತ ಅರುಣ್ ಪೈ ಅವರನ್ನು ಅಧಿಕೃತವಾಗಿ ರಾಯಭಾರಿಗಳನ್ನಾಗಿ ಘೋಷಿಸಲಾಗಿದೆ.

ಸ್ವಚ್ಛ ಸರ್ವೇಕ್ಷಣ್ ಅಭಿಯಾನದ ಅಂಗವಾಗಿ ನಾಗರಿಕರಲ್ಲಿ ಕಸ ವಿಂಗಡಣೆ, ಪ್ಲಾಸ್ಟಿಕ್ ಕಡಿತ ಹಾಗೂ ಪರಿಸರ ಸಂರಕ್ಷಣೆಯ ಬಗ್ಗೆ ಅರಿವು ಮೂಡಿಸಲು ಈ ಕ್ರಮ ಕೈಗೊಳ್ಳಲಾಗಿದೆ. ಮಾರ್ಚ್ 9ರಂದು ಟೌನ್ ಹಾಲ್‌ನಲ್ಲಿ ನಡೆಯಲಿರುವ ವಿಶೇಷ ಕಾರ್ಯಕ್ರಮದಲ್ಲಿ ಈ ರಾಯಭಾರಿಗಳಿಗೆ ಅಧಿಕೃತವಾಗಿ ಜವಾಬ್ದಾರಿ ನೀಡಲಾಗುತ್ತದೆ. ಇವರ ಮೂಲಕ ನಗರಾದ್ಯಂತ ಜಾಗೃತಿ ಕಾರ್ಯಕ್ರಮಗಳು, ಸಾರ್ವಜನಿಕ ಸಂವಾದಗಳು ಹಾಗೂ ಶಾಲಾ-ಕಾಲೇಜು ಮಟ್ಟದಲ್ಲಿ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗುತ್ತದೆ.

ಪ್ಲಾಸ್ಟಿಕ್ ಸಂಗ್ರಹದಲ್ಲಿ ಮಹತ್ವದ ಸಾಧನೆ; ನಗರದಲ್ಲಿ ಪ್ರತಿದಿನ ಸರಾಸರಿ 6,000 ಮೆಟ್ರಿಕ್ ಟನ್ ಘನತ್ಯಾಜ್ಯ ಉತ್ಪತ್ತಿಯಾಗುತ್ತಿದೆ. ಅದರಲ್ಲಿ ಸುಮಾರು 520 ಮೆಟ್ರಿಕ್ ಟನ್ ಕಡಿಮೆ ಮೌಲ್ಯದ ಪ್ಲಾಸ್ಟಿಕ್ ತ್ಯಾಜ್ಯವನ್ನು ಸಂಗ್ರಹಿಸಲಾಗುತ್ತಿದೆ. ಈ ಪ್ರಮಾಣವನ್ನು 1,000 ಮೆಟ್ರಿಕ್ ಟನ್‌ಗೆ ಹೆಚ್ಚಿಸುವ ಗುರಿ ಹೊಂದಲಾಗಿದೆ. ಕಸ ವಿಂಗಡಣೆ ಮಾಡುವ ಅಭ್ಯಾಸ ಹೆಚ್ಚುತ್ತಿರುವುದರಿಂದ ಪ್ಲಾಸ್ಟಿಕ್ ಸಂಗ್ರಹದಲ್ಲೂ ಗಣನೀಯ ಏರಿಕೆ ಕಂಡುಬಂದಿದೆ.

ನಿಯಮ ಉಲ್ಲಂಘನೆಗೆ ಭಾರೀ ದಂಡ: ರಸ್ತೆಬದಿ ಕಸ ಬಿಸಾಡುವುದು, ವಿಂಗಡಿಸದೆ ತ್ಯಾಜ್ಯ ನೀಡುವುದು ಸೇರಿದಂತೆ ನಿಯಮ ಉಲ್ಲಂಘನೆ ಮಾಡುವವರಿಂದ ಪ್ರತಿ ತಿಂಗಳು ಸರಾಸರಿ 60 ಲಕ್ಷ ರೂಪಾಯಿ ದಂಡ ಸಂಗ್ರಹಿಸಲಾಗುತ್ತಿದೆ. ಈ ದಂಡದ ಹಣವನ್ನು ಸಮರ್ಪಕವಾಗಿ ಬಳಸಿಕೊಂಡು ಪ್ರತಿಯೊಂದು ವಿಧಾನಸಭಾ ಕ್ಷೇತ್ರಕ್ಕೂ ಒಂದು ಟ್ರ್ಯಾಕ್ಟರ್ ಖರೀದಿಸಲಾಗಿದೆ.

ಈ ಟ್ರ್ಯಾಕ್ಟರ್‌ಗಳ ಮೂಲಕ ಬಲ್ಕ್ ವೇಸ್ಟ್ ತೆರವು ಕಾರ್ಯ ಚುರುಕುಗೊಂಡಿದ್ದು, ಕಳೆದ ಮೂರು ತಿಂಗಳಲ್ಲಿ 6,000 ಮೆಟ್ರಿಕ್ ಟನ್‌ಗಿಂತ ಹೆಚ್ಚು ಬಲ್ಕ್ ತ್ಯಾಜ್ಯವನ್ನು ಸಂಗ್ರಹಿಸಲಾಗಿದೆ.

ಸಮಗ್ರ ತ್ಯಾಜ್ಯ ನಿರ್ವಹಣೆಗೆ 100 ಎಕರೆ ಜಾಗ: ದೊಡ್ಡಬಳ್ಳಾಪುರ ತಾಲೂಕಿನ ದೊಡ್ಡಬೆಳವಂಗಳ ಹೋಬಳಿಯ ಗುಂಡಲಹಳ್ಳಿ ಟೆರ್ರಾ ಫಾರ್ಮ್ ಪ್ರದೇಶ ಹಾಗೂ ಬೆಂಗಳೂರು ದಕ್ಷಿಣ ವ್ಯಾಪ್ತಿಯ ಗೊಲ್ಲಹಳ್ಳಿಯಲ್ಲಿ ಸರ್ಕಾರಿ ಜಾಗ ಸೇರಿದಂತೆ 100 ಎಕರೆಗೂ ಹೆಚ್ಚು ಜಾಗವನ್ನು ಸಮಗ್ರ ಘನತ್ಯಾಜ್ಯ ನಿರ್ವಹಣಾ ಯೋಜನೆಗಾಗಿ ಗುರುತಿಸಲಾಗಿದೆ. ಸರ್ಕಾರದಿಂದ ಭೂ ಪರಿಹಾರ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಕಾಮಗಾರಿಗಳು ಆರಂಭಗೊಳ್ಳಲಿವೆ.

ಕಸ ಸಮಸ್ಯೆಗೆ ತಕ್ಷಣ ದೂರು ನೀಡಲು ವ್ಯವಸ್ಥೆ; ನಗರದ ಯಾವುದೇ ಭಾಗದಲ್ಲಿ ಕಸದ ಸಮಸ್ಯೆ ಕಂಡುಬಂದರೆ 'ಸಹಾಯ 2.0' ತಂತ್ರಾಂಶ, ಜಿಬಿಎ ಸಹಾಯವಾಣಿ ಸಂಖ್ಯೆ 1533 ಅಥವಾ ವಾಟ್ಸಪ್ ಚಾಟ್‌ಬಾಟ್ 9448197197 ಮೂಲಕ ದೂರು ನೀಡಬಹುದು. ಇಂಟಿಗ್ರೇಟೆಡ್ ಕಮಾಂಡ್ ಕಂಟ್ರೋಲ್ ಸೆಂಟರ್ ಮೂಲಕ ದೂರುಗಳನ್ನು ಪರಿಶೀಲಿಸಿ ಸಂಬಂಧಿಸಿದ ಅಧಿಕಾರಿಗಳಿಗೆ ತಕ್ಷಣ ಮಾಹಿತಿ ನೀಡಲಾಗುತ್ತದೆ.

ಮೊಬೈಲ್ ಕದಿಯೋಕೆ ಫ್ಲೈಟ್‌ನಲ್ಲಿ ಬರ್ತಿದ್ದ ಖದೀಮರು

ಬೆಂಗಳೂರು: ಸಾಮಾನ್ಯವಾಗಿ ದ್ವಿಚಕ್ರ ವಾಹನ ಅಥವಾ ಕಾರಿನಲ್ಲಿ ಬಂದು ಕ್ಷಣಾರ್ಧದಲ್ಲಿ ಮೊಬೈಲ್ ಕಸಿದು ಪರಾರಿಯಾಗುವ ಕಳ್ಳರ ಬಗ್ಗೆ ನಾವು ಸಾಕಷ್ಟು ಕೇಳಿದ್ದೇವೆ. ಆದರೆ ನಗರದಲ್ಲಿ ಭೇದವಾಗಿರುವ ಈ ಹೊಸ ಮೊಬೈಲ್ ಕಳ್ಳತನ ಜಾಲ ಪೊಲೀಸರನ್ನೇ ಅಚ್ಚರಿಗೊಳಿಸಿದೆ. ಯಾಕೆಂದರೆ ಈ ಖದೀಮರು ಮೊಬೈಲ್ ಕಳವು ಮಾಡಲು ಸಾಮಾನ್ಯವಾಗಿ ಬರುವವರಲ್ಲ-ನೇರವಾಗಿ ವಿಮಾನದಲ್ಲಿ ಪ್ರಯಾಣಿಸಿ ನಗರಕ್ಕೆ ಬಂದು ತಮ್ಮ ಕೃತ್ಯ ಎಸಗುತ್ತಿದ್ದವರು. ಕೇಳಲು ಅಸಾಧ್ಯವೆನಿಸಿದರೂ, ತನಿಖೆಯಲ್ಲಿ ಇದು ಸತ್ಯವೆಂಬುದು ಬಹಿರಂಗವಾಗಿದೆ.

ಪೊಲೀಸರ ವಿವರಗಳ ಪ್ರಕಾರ, ಬಂಧಿತ ಆರೋಪಿಗಳು ಸಣ್ಣಪುಟ್ಟ ಮೊಬೈಲ್‌ಗಳನ್ನು ಮುಟ್ಟುತ್ತಲೂ ಇರಲಿಲ್ಲ. ದುಬಾರಿ ಬ್ರ್ಯಾಂಡ್ ಫೋನ್‌ಗಳು, ವಿಶೇಷವಾಗಿ ಐಫೋನ್‌ಗಳು ಸೇರಿದಂತೆ ಹೆಚ್ಚಿನ ಬೆಲೆಯ ಮೊಬೈಲ್‌ಗಳನ್ನೇ ಟಾರ್ಗೆಟ್ ಮಾಡುತ್ತಿದ್ದರು. ದೊಡ್ಡ ಮಟ್ಟದ ಪಾರ್ಟಿಗಳು, ಸಂಗೀತ ಕಾರ್ಯಕ್ರಮಗಳು ಹಾಗೂ ಜನಸಂದಣಿ ಇರುವ ಸಮಾರಂಭಗಳಿಗೆ ಪ್ರವೇಶ ಪಡೆದು, ಜನರ ಅಜಾಗರೂಕತೆಯನ್ನು ಬಳಸಿಕೊಂಡು ಕ್ಷಣಾರ್ಧದಲ್ಲಿ ಫೋನ್‌ಗಳನ್ನು ಕಳವು ಮಾಡುತ್ತಿದ್ದರು. ಕೆಲ ಸಂಗೀತ ಕಾರ್ಯಕ್ರಮಗಳಲ್ಲಿ ಕೇವಲ ಒಂದು ಗಂಟೆಯೊಳಗೆ 14 ಮೊಬೈಲ್‌ಗಳನ್ನು ಕದ್ದಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಇಷ್ಟೇ ಅಲ್ಲದೆ, ಐಷಾರಾಮಿ ಬಸ್‌ಗಳಲ್ಲೂ ಇವರು ತಮ್ಮ ಕೈಚಳಕ ತೋರಿಸುತ್ತಿದ್ದರು. ದೇವನಹಳ್ಳಿ ಬಳಿಯ ಚನ್ನರಾಯಪಟ್ಟಣದಲ್ಲಿ ಮೊಬೈಲ್ ಕಳವು ನಡೆಸಿದ ನಂತರ, ವೈಟ್‌ಫೀಲ್ಡ್ ಕಡೆ ಪ್ರಯಾಣಿಸುವ ವೇಳೆ ಬಸ್‌ನಲ್ಲಿ ಮತ್ತೊಂದು ಐಫೋನ್ ಕಳವು ಮಾಡಿರುವುದು ತಿಳಿದುಬಂದಿದೆ. ಕಳುವಾದ ಮೊಬೈಲ್‌ಗಳ ಲೋಕೇಶನ್ ಟ್ರ್ಯಾಕ್ ಮಾಡುವ ಮೂಲಕ ಪೊಲೀಸರು ಆರೋಪಿಗಳ ಹಾದಿಯನ್ನು ಪತ್ತೆ ಹಚ್ಚಿದರು. ಮೊಬೈಲ್ ಪತ್ತೆ ಕಾರ್ಯಾಚರಣೆಯಲ್ಲಿ ಬೆನ್ನುಹತ್ತಿದ ಪೊಲೀಸರಿಗೆ ಕೊನೆಗೂ ಆರೋಪಿಗಳು ಲಾಕ್ ಆಗಿದ್ದಾರೆ.

ನಗರದ ಲಾಡ್ಜ್ ಒಂದರಲ್ಲಿ ಕದ್ದ ಮೊಬೈಲ್‌ಗಳನ್ನು ಪರಿಶೀಲಿಸುತ್ತಿದ್ದಾಗ ಪೊಲೀಸರು ದಾಳಿ ನಡೆಸಿ ಆರೋಪಿಗಳನ್ನು ಬಂಧಿಸಿದರು. ದೆಹಲಿ ಮೂಲದ ಜಯಚಂದ್ರ ಮತ್ತು ತರುಣ್ ಬಂಧಿತರಾಗಿದ್ದು, ಇವರಿಂದ ಸುಮಾರು 10 ಲಕ್ಷ ರೂಪಾಯಿ ಮೌಲ್ಯದ 14 ದುಬಾರಿ ಮೊಬೈಲ್‌ಗಳನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿಗಳು ಮೊಬೈಲ್ ಕಳವು ಮಾಡಲುಂದೇ ದೆಹಲಿಯಿಂದ ವಿಮಾನದಲ್ಲಿ ಬೆಂಗಳೂರಿಗೆ ಬರುತ್ತಿದ್ದರೆಂಬುದು ತನಿಖೆಯಲ್ಲಿ ಬಹಿರಂಗವಾಗಿದೆ.

ಈ ಹೈಫೈ ಕಳ್ಳತನ ಜಾಲದ ಹಿಂದೆ ಇನ್ನೂ ಹೆಚ್ಚಿನವರ ಸಂಪರ್ಕವಿದೆಯೇ ಎಂಬುದರ ಬಗ್ಗೆ ಪೊಲೀಸರು ಪರಿಶೀಲನೆ ಮುಂದುವರಿಸಿದ್ದಾರೆ. ನಗರದಲ್ಲಿ ನಡೆಯುವ ದೊಡ್ಡ ಕಾರ್ಯಕ್ರಮಗಳಲ್ಲಿ ಭದ್ರತಾ ಕ್ರಮಗಳನ್ನು ಮತ್ತಷ್ಟು ಕಠಿಣಗೊಳಿಸುವ ಅಗತ್ಯವಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಪ್ರಕರಣದ ಸಂಪೂರ್ಣ ತನಿಖೆ ನಡೆಯುತ್ತಿದ್ದು, ಇನ್ನಷ್ಟು ಮಾಹಿತಿ ಹೊರಬರುವ ಸಾಧ್ಯತೆ ಇದೆ.

ಕೇಂದ್ರ ಸರ್ಕಾರದ ಇವಿ ಬೈಕ್ ಸಬ್ಸಿಡಿ ಯೋಜನೆ ಹೆಸರಲ್ಲಿ ಕೋಟ್ಯಂತರ ರೂ. ವಂಚನೆ

ಬೆಂಗಳೂರು:ಸಿಲಿಕಾನ್ ಸಿಟಿಯಲ್ಲಿ ಎಲೆಕ್ಟ್ರಿಕ್ ಬೈಕ್ ವಿತರಣೆ ಹೆಸರಿನಲ್ಲಿ ಭಾರೀ ಪ್ರಮಾಣದ ಹಣಕಾಸು ವಂಚನೆ ನಡೆದಿರುವ ಪ್ರಕರಣ ಬೆಳಕಿಗೆ ಬಂದಿದ್ದು, ಸಾವಿರಾರು ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. 'ಆಪ್ಕಿ ಇವಿ' ಎಂಬ ಹೆಸರಿನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶೋರೂಂ ಮಾಲೀಕರು ಸುಮಾರು 35 ಕೋಟಿ ರೂಪಾಯಿ ವಂಚನೆ ನಡೆಸಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಈ ದಂಧೆಯಲ್ಲಿ ಸುಮಾರು 3,250ಕ್ಕೂ ಹೆಚ್ಚು ಗ್ರಾಹಕರು ಸಿಲುಕಿರುವುದು ತಿಳಿದುಬಂದಿದೆ.

ಶೋರೂಂ ವತಿಯಿಂದ "ಕೇವಲ 20,000 ರೂ. ಡಿಪಾಸಿಟ್ ಮಾಡಿದರೆ ಸಾಕು, ಉಳಿದ ಮೊತ್ತವನ್ನು ಕೇಂದ್ರ ಸರ್ಕಾರದ ಸಬ್ಸಿಡಿ ಯೋಜನೆಯಡಿ ಪಾವತಿಸಲಾಗುತ್ತದೆ" ಎಂದು ನಂಬಿಸಿ ಜನರನ್ನು ಆಕರ್ಷಿಸಲಾಗಿತ್ತು. ಕಡಿಮೆ ಬೆಲೆಗೆ ಎಲೆಕ್ಟ್ರಿಕ್ ಬೈಕ್ ಸಿಗುತ್ತದೆ ಎಂಬ ಆಸೆ ತೋರಿಸಿ, ಅನೇಕ ಮಧ್ಯಮವರ್ಗದ ಕುಟುಂಬಗಳನ್ನು ಲೋನ್ ಬಲೆಗೆ ಸೆಳೆದಿರುವುದು ಆರೋಪವಾಗಿದೆ. ಬೈಕ್ ನೀಡುವ ಪ್ರಕ್ರಿಯೆ ಹೆಸರಿನಲ್ಲಿ ಗ್ರಾಹಕರಿಂದ ಆಧಾರ್ ಕಾರ್ಡ್, ಪಾನ್ ಕಾರ್ಡ್ ಸೇರಿದಂತೆ ವೈಯಕ್ತಿಕ ದಾಖಲೆಗಳನ್ನು ಸಂಗ್ರಹಿಸಲಾಗಿತ್ತು.

ಆದರೆ, ನಂತರ ಗ್ರಾಹಕರಿಗೆ ತಿಳಿಯದಂತೆ ಅವರ ಹೆಸರಿನಲ್ಲಿ ಕೊಟಕ್ ಮಹೀಂದ್ರಾ ಬ್ಯಾಂಕ್ ಮೂಲಕ ದೊಡ್ಡ ಮೊತ್ತದ ಸಾಲಗಳನ್ನು ಮಂಜೂರು ಮಾಡಿಸಲಾಗಿದೆ ಎನ್ನಲಾಗಿದೆ. ಸಾಮಾನ್ಯವಾಗಿ ಸುಮಾರು 35,000 ರೂ. ಮೌಲ್ಯದ ಎಲೆಕ್ಟ್ರಿಕ್ ಬೈಕ್‌ಗೆ ಬರೋಬ್ಬರಿ 1.50 ಲಕ್ಷ ರೂಪಾಯಿ ಲೋನ್ ಮಾಡಿಸಿ, ಆ ಮೊತ್ತವನ್ನು ಬ್ಯಾಂಕ್‌ನಿಂದ ಪಡೆದುಕೊಳ್ಳಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಗ್ರಾಹಕರು ಯಾವುದೇ ಅಧಿಕೃತ ಒಪ್ಪಿಗೆ ನೀಡದೆ ಇದ್ದರೂ ಸಾಲ ಮಂಜೂರಾಗಿರುವುದು ಪ್ರಕರಣವನ್ನು ಇನ್ನಷ್ಟು ಗಂಭೀರವಾಗಿಸಿದೆ.

ಈ ವಂಚನೆಗೆ ಸಂಬಂಧಿಸಿದಂತೆ ಕೊಟಕ್ ಮಹೀಂದ್ರಾ ಬ್ಯಾಂಕ್‌ನ ಮ್ಯಾನೇಜರ್ ಕೂಡ ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದೆ. ಗ್ರಾಹಕರ ಅನುಮತಿಯಿಲ್ಲದೆ ಲೋನ್ ಪ್ರಕ್ರಿಯೆ ಪೂರ್ಣಗೊಳಿಸಿ, ಹಣ ಬಿಡುಗಡೆ ಮಾಡಲಾಗಿದೆ ಎಂದು ಪೀಡಿತರು ಆರೋಪಿಸಿದ್ದಾರೆ. ಇದರ ಪರಿಣಾಮವಾಗಿ ಅನೇಕ ಜನರು ತಮ್ಮ ಹೆಸರಿನಲ್ಲಿ ಲಕ್ಷಾಂತರ ರೂಪಾಯಿ ಸಾಲ ಬಾಕಿ ಇರುವುದನ್ನು ಕಂಡು ಬೆಚ್ಚಿಬಿದ್ದಿದ್ದಾರೆ.

ತಮಗೆ ಮೋಸವಾಗಿರುವುದು ತಿಳಿದು ಕೋಪಗೊಂಡ ಗ್ರಾಹಕರು ಇಂದು ಭಾರೀ ಪ್ರತಿಭಟನೆ ನಡೆಸಿದರು. ಜಾಲಹಳ್ಳಿ ಮೆಟ್ರೋ ನಿಲ್ದಾಣದಿಂದ ಎಂ.ಜಿ. ರಸ್ತೆವರೆಗೆ ಬೃಹತ್ ಬೈಕ್ ರ್ಯಾಲಿ ನಡೆಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಸುಮಾರು 500ಕ್ಕೂ ಹೆಚ್ಚು ಪೀಡಿತರು ಭಾಗವಹಿಸಿ, ತಮಗೆ ನ್ಯಾಯ ಒದಗಿಸಬೇಕೆಂದು ಆಗ್ರಹಿಸಿದರು. ಆರೋಪಿಗಳಾದ ರವಿ ಮತ್ತು ಹನುಮಂತರಾಜು ಅವರನ್ನು ತಕ್ಷಣ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಸರ್ಕಾರ ಮತ್ತು ಪೊಲೀಸರ ವಿರುದ್ಧ ಘೋಷಣೆ ಕೂಗಿದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಗಲಗುಂಟೆ ಮತ್ತು ಪೀಣ್ಯ ಪೊಲೀಸ್ ಠಾಣೆಗಳಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಸ್ಥಳಕ್ಕೆ ಭೇಟಿ ನೀಡಿದ ಬಾಗಲಗುಂಟೆ ಠಾಣಾಧಿಕಾರಿಗಳು, ಪ್ರಕರಣದ ಸಂಪೂರ್ಣ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ. ತನಿಖೆ ಮುಂದುವರಿದಿದ್ದು, ಇನ್ನಷ್ಟು ಸತ್ಯಾಂಶಗಳು ಬಹಿರಂಗವಾಗುವ ಸಾಧ್ಯತೆ ಇದೆ

ಈ ಊರಲ್ಲಿ ಹೋಳಿ ಆಚರಣೆ ಫುಲ್ ಡಿಫರೆಂಟ್

ಧಾರವಾಡ: ಹೋಳಿ ಹಬ್ಬದ ಆಚರಣೆ ಪ್ರದೇಶಗಳಿಗೆ ಅನುಗುಣವಾಗಿ ಬದಲಾಗೋದು ಎಲ್ಲರಿಗೂ ಗೊತ್ತಿರುವ ವಿಚಾರ. ಧಾರವಾಡದ ಮುಳಮುತ್ತಲ ಗ್ರಾಮ ಗ್ರಾಮದಲ್ಲಿಯೂ ವಿಭಿನ್ನ ರೀತಿಯಲ್ಲಿ ಬಣ್ಣದ ಹಬ್ಬದ ಆಚರಣೆ ನಡೆಯುತ್ತೆ. ಬಣ್ಣದೋಕುಳಿಯ ಬದಲಾಗಿ ತಮ್ಮೂರಿನ ಕಾಮದೇವನ ಮೂರ್ತಿಯನ್ನು ಯಾರಾದರೂ ಕದ್ದೊಯ್ಯಬಾರದು ಎಂದು ಗ್ರಾಮಸ್ಥರೆಲ್ಲ ತಮ್ಮ ತಮ್ಮ ಮನೆಯಲ್ಲಿರೋ ಆಯುಧಗಳೊಂದಿಗೆ ಕಾಮಣ್ಣನ ರಕ್ಷಣೆಗೆ ನಿಲ್ಲೋದು ಇಲ್ಲಿಯ ವಿಶೇಷ.

ಗ್ರಾಮದ ಗರಡಿ ಮನೆಯ ಮುಂಭಾಗದಲ್ಲಿ ಸುಮಾರು 12 ಅಡಿ ಎತ್ತರ ಮಂಟಪವನ್ನ ನಿರ್ಮಿಸಿ, ಸುತ್ತಲೂ ಕಟ್ಟಿಗೆಯ ಭದ್ರತೆಯೊಂದಿಗೆ ಕಾಮಣ್ಣನನ್ನು ಪ್ರತಿಷ್ಠಾಪಿಸಲಾಗುತ್ತದೆ. ಈ ಮೂರ್ತಿಯನ್ನು ಯಾರಾದರೂ ಕದಿಯಬಾಹುದೆಂಬ ಕಾರಣಕ್ಕೆ ಗ್ರಾಮಸ್ಥರು ಬಹಳ ಹಿಂದಿನಿಂದಲೂ ಇಂತಹ ಸಂಪ್ರದಾಯವೊಂದನ್ನು ಆಚರಿಸಿಕೊಂಡು ಬರುತ್ತಿದ್ದಾರೆ ಎನ್ನಲಾಗಿದೆ. ಅಷ್ಟಕ್ಕೂ ಊರ ಜನರೆಲ್ಲ ಆಯುಧಗಳನ್ನು ಹಿಡಿದು ಈ ರೀತಿ ಕಾವಲು ನಿಲ್ಲುವುದರ ಹಿಂದೆ ಐತಿಹಾಸಿಕ ಕತೆಯೊಂದಿದೆ.

ಹಲವಾರು ವರ್ಷಗಳ ಹಿಂದೆ ಗ್ರಾಮದ ಬುಡ್ಡಪ್ಪ ಕಣವಿ ಅನ್ನೋ ವ್ಯಕ್ತಿ ಅತ್ತಿಗೆಗೆ ಕುಡಿಯಲು ನೀರು ಕೇಳುತ್ತಾನಂತೆ. ಆಕೆ ನೀನು ಅದೇನು ದೊಡ್ಡ ಕಾರ್ಯ ಮಾಡಿ ಬಂದಿದ್ದೀಯಾ ಅಂತಾ ಹೀಯಾಳಿಸುತ್ತಾಳಂತೆ. ಇದರಿಂದ ನೊಂದ ಬುಡ್ಡಪ್ಪ ಪಕ್ಕದ ಅಣ್ಣಿಗೇರಿ ಗ್ರಾಮಕ್ಕೆ ಹೋಗಿ, ಅಲ್ಲಿನ ರಾಜರು ಪ್ರತಿಷ್ಠಾಪಿಸಿದ್ದ ಕಾಮಣ್ಣನ ಮೂರ್ತಿಯ ತಲೆಯನ್ನು ಕತ್ತರಿಸಿಕೊಂಡು ತರುತ್ತಾನೆ. ಬಳಿಕ ತಾನು ಮಾಡಿದ ಸಾಧನೆಯನ್ನ ತೋರಿಸಲು ಗ್ರಾಮದ ಅಗಸಿಯಲ್ಲಿ ಮೂರ್ತಿಯನ್ನಿಟ್ಟು, ಕತ್ತು ಕುಯ್ದುಕೊಂಡು ಆತ್ಮಹತ್ಯೆ ಮಾಡಿಕೊಳ್ಳುತ್ತಾನಂತೆ. ಅಂದು ಕಾಮಣ್ಣನ ಮೂರ್ತಿಯ ತಲೆಯನ್ನು ಮರಳಿ ಪಡೆಯಲು ಆಯುಧ ಸಮೇತ ಬಂದ ಅಣ್ಣಿಗೇರಿ ಗ್ರಾಮಸ್ಥರನ್ನ ಹಿಮ್ಮೆಟ್ಟಿಸಲು ಸ್ಥಳೀಯರು ಆಯುಧಗಳೊಂದಿಗೆ ಹೋರಾಟಕ್ಕೆ ನಿಲ್ಲುತ್ತಾರೆ. ಈ ಗ್ರಾಮಸ್ಥರನ್ನ ನೋಡಿ ಇವರ ಸಹವಾಸವೇ ಬೇಡ ಅಂತಾ ಅಣ್ಣಿಗೇರಿ ಗ್ರಾಮಸ್ಥರು ಮರಳಿ ಹೋಗುತ್ತಾರಂತೆ. ಬಳಿಕ ಗ್ರಾಮದಾದ್ಯಂತ ಬುಡ್ಡಪ್ಪ ಸತ್ತ ಹಿನ್ನೆಲೆಯಲ್ಲಿ ಶೋಕಾಚರಣೆ ನಡೆಯುತ್ತೆ. ಇದೇ ಕಾರಣಕ್ಕೆ ಬಣ್ಣದೋಕುಳಿಯನ್ನೂ ನಿಷೇಧಿಸಲಾಗುತ್ತೆ. ಅಂದು ಅನಿವಾರ್ಯತೆಯಿಂದಾಗಿ ನಡೆದ ಹೋರಾಟ ಇಂದು ಆಚರಣೆಯಾಗಿ ಬದಲಾಗಿದೆ. ಈ ವಿಚಿತ್ರವನ್ನು ನೋಡಲು ಇಂದಿಗೂ ಬೇರೆ ಬೇರೆ ಕಡೆಗಳಿಂದ ಜನರು ಬರುತ್ತಾರೆ. ಹೀಗೆ ಬಂದವರು ಏನಾದರೂ ಬೇಡಿಕೊಂಡರೆ, ಅದು ಸಿಗುತ್ತೆ ಅನ್ನೋ ನಂಬಿಕೆಯೂ ಜನರಲ್ಲಿದೆ.

ಅಷ್ಟೇ ಅಲ್ಲ, ಆರಂಭದ ವರ್ಷಗಳಲ್ಲಿ ಹೋಳಿ ಹಬ್ಬದ ವೇಳೆಯಲ್ಲಿ ಬೇರೆ ಗ್ರಾಮದ ಯಾರಿಗೂ ಕೂಡ ಇಲ್ಲಿಗೆ ಪ್ರವೇಶವೂ ಇರಲಿಲ್ಲ. ಬೇರೆ ಯಾವುದೋ ನೆಪ ಮಾಡಿಕೊಂಡು ಬಂದು, ಮೂರ್ತಿಯನ್ನು ಕದ್ದೊಯ್ಯುರೆ ಹೇಗೆ ಅನ್ನೋ ಅನುಮಾನವೇ ಇದಕ್ಕೆ ಕಾರಣವಾಗಿತ್ತು. ಆದರೆ ವರ್ಷಗಳು ಉರುಳಿದಂತೆ ಆ ನಿಯಮವನ್ನ ಸಡಿಲಿಸಲಾಗಿದೆ. ಆದರೆ ಅಂದು ಆರಂಭವಾದ ಕಾಮಣ್ಣನನ್ನು ಕಾಯೋ ಕೆಲಸ ಸಾಂಪ್ರದಾಯಿಕ ಆಚರಣೆಯ ರೂಪ ತಳೆದು, ಇವತ್ತಿಗೂ ಮುಂದುವರಿದಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near vFloor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ರಾಜ್ಯ ರಾಜಕಾರಣದಲ್ಲಿ ಫೋನ್ ಟ್ಯಾಪಿಂಗ್ ಬಿರುಗಾಳಿ

ಬೆಂಗಳೂರು: ಕಳೆದ ಕೆಲವು ತಿಂಗಳುಗಳಿಂದ ರಾಜ್ಯ ರಾಜಕಾರಣದಲ್ಲಿ ನಡೆಯುತ್ತಿರುವ ಕುರ್ಚಿ ಕಾಳಗದ ಮಧ್ಯೆ ಇದೀಗ ಫೋನ್ ಟ್ಯಾಪಿಂಗ್ ಆರೋಪ ಹೊಸ ತಿರುವು ಪಡೆದುಕೊಂಡಿದೆ. ಈಗಾಗಲೇ ನಾಯಕತ್ವ ಬದಲಾವಣೆ, ಅಧಿಕಾರ ಹಂಚಿಕೆ, ಆಂತರಿಕ ಅಸಮಾಧಾನ ಇತ್ಯಾದಿ ವಿಚಾರಗಳಿಂದ ರಾಜಕೀಯ ವಲಯ ಕಾವು ಗೊಂಡಿರುವ ಸಂದರ್ಭದಲ್ಲಿ, ಗುಪ್ತಚರ ಇಲಾಖೆಯ ದುರುಪಯೋಗ ಕುರಿತು ಬಂದಿರುವ ಆರೋಪಗಳು ಪರಿಸ್ಥಿತಿಯನ್ನು ಮತ್ತಷ್ಟು ಉತ್ಕಂಠೆಯ ಮಟ್ಟಕ್ಕೆ ತೆಗೆದುಕೊಂಡಿವೆ.

ವಿಪಕ್ಷಗಳು ಮಾಡಿರುವ ಆರೋಪದ ಪ್ರಕಾರ, ರಾಜ್ಯ ಸರ್ಕಾರವು ಗುಪ್ತಚರ ಇಲಾಖೆಯನ್ನು ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ವಿಶೇಷವಾಗಿ, ಪಕ್ಷದೊಳಗಿನ ಶಾಸಕರು ಹಾಗೂ ಕೆಲವು ಪ್ರಮುಖ ನಾಯಕರ ಚಲನವಲನಗಳ ಮೇಲೆ ನಿಗಾ ಇಡಲಾಗುತ್ತಿದೆ ಎನ್ನುವ ಶಂಕೆ ವ್ಯಕ್ತವಾಗಿದೆ. ಡಿಸಿಎಂ ಪರವಾಗಿರುವ ಶಾಸಕರ ಬಗ್ಗೆ ಮಾಹಿತಿ ಸಂಗ್ರಹಿಸಲು ಮುಖ್ಯಮಂತ್ರಿ ಸೂಚನೆ ನೀಡಿರುವ ಸಾಧ್ಯತೆ ಇದೆ ಎಂದು ವಿಪಕ್ಷ ನಾಯಕರು ಆರೋಪಿಸಿದ್ದಾರೆ. ಇದಕ್ಕಾಗಿ ಎಸ್ಪಿ ನೇತೃತ್ವದ ವಿಶೇಷ ತಂಡವನ್ನೇ ರಚಿಸಲಾಗಿದೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿವೆ.

ಈ ಆರೋಪಗಳು ಹೊರಬಂದ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ಪ್ರತಿಕ್ರಿಯೆ ನೀಡಿದ್ದಾರೆ. ಮಾಧ್ಯಮ ಪ್ರಕಟಣೆ ಮೂಲಕ ಸ್ಪಷ್ಟನೆ ನೀಡಿರುವ ಅವರು, ಇವು ಅತೃಪ್ತ ಆತ್ಮಗಳ ಹತಾಶ ಹೇಳಿಕೆಗಳು ಎಂದು ಕಿಡಿಕಾರಿದ್ದಾರೆ. "ತಾ ಕಳ್ಳ ಇತರರ ನಂಬ" ಎಂಬ ಗಾದೆ ಮಾತು ಉಲ್ಲೇಖಿಸಿ, ತಮ್ಮ ಮೇಲೆ ಆರೋಪ ಮಾಡುವವರು ತಮ್ಮ ಅನುಭವದ ಆಧಾರದಲ್ಲೇ ಇಂತಹ ಕಲ್ಪನೆಗಳನ್ನು ಮಾಡುತ್ತಿದ್ದಾರೆ ಎನ್ನುವ ಅರ್ಥದಲ್ಲಿ ಅವರು ಪ್ರತಿಕ್ರಿಯಿಸಿದ್ದಾರೆ. ತಮ್ಮ ಮತ್ತು ಡಿಕೆಶಿ ನಡುವಿನ ಸಂಬಂಧವನ್ನು ಕೇಡುಗೋಳಿಸಲು ವಿಪಕ್ಷಗಳು ಪ್ರಯತ್ನಿಸುತ್ತಿವೆ ಎಂದು ಅವರು ಹೇಳಿದ್ದಾರೆ.

ಮುಖ್ಯಮಂತ್ರಿಯವರ ಮಾತಿನಂತೆ, ತಮ್ಮ ಮತ್ತು ಡಿಕೆಶಿ ನಡುವಿನ ಸಂಬಂಧ ಹಾಲು-ಜೇನಿನಂತಿದ್ದು, ಅದರಲ್ಲಿ ಹುಳಿ ಹಿಂಡುವ ಪ್ರಯತ್ನಗಳು ಫಲಪ್ರದವಾಗುವುದಿಲ್ಲ. ಆರೋಪ ಮಾಡುತ್ತಿರುವವರಲ್ಲಿ ಒಬ್ಬರು ಹಿಂದೆ ಮುಖ್ಯಮಂತ್ರಿಯಾಗಿದ್ದರು, ಇನ್ನೊಬ್ಬರು ಉಪಮುಖ್ಯಮಂತ್ರಿ ಮತ್ತು ಗೃಹ ಸಚಿವರಾಗಿದ್ದರು. ಅವರ ಆಡಳಿತಾವಧಿಯಲ್ಲೂ ಗುಪ್ತಚರ ಇಲಾಖೆ ಮುಖ್ಯಮಂತ್ರಿಯವರ ಅಧೀನದಲ್ಲೇ ಇತ್ತು. ಆದ್ದರಿಂದ ತಮ್ಮ ಅನುಭವದ ಆಧಾರದಲ್ಲೇ ಇಂತಹ ಆರೋಪಗಳನ್ನು ಮಾಡುತ್ತಿರುವಂತೆ ಕಾಣುತ್ತಿದೆ ಎಂದು ಅವರು ಟೀಕಿಸಿದ್ದಾರೆ.

ಪಕ್ಷದ ಒಳರಾಜಕೀಯದ ವಿಚಾರದಲ್ಲೂ ಸಿಎಂ ಸ್ಪಷ್ಟನೆ ನೀಡಿದ್ದಾರೆ. ಕಾಂಗ್ರೆಸ್ ಪಕ್ಷದಲ್ಲಿ ಆಂತರಿಕ ಪ್ರಜಾಪ್ರಭುತ್ವವಿದೆ; ಇದು ಏಕಕುಟುಂಬದ ಅಧಿಪತ್ಯ ಹೊಂದಿರುವ ಪಕ್ಷವಲ್ಲ ಎಂದು ಅವರು ಹೇಳಿದ್ದಾರೆ. ತಮ್ಮ ಶಾಸಕರಲ್ಲಿ ಯಾರೂ ವೈಯಕ್ತಿಕವಾಗಿ ಸಿಎಂ ಅಥವಾ ಡಿಕೆಶಿ ಬೆಂಬಲಿಗರಲ್ಲ, ಎಲ್ಲರೂ ಪಕ್ಷದ ಬೆಂಬಲಿಗರು ಮಾತ್ರ ಎಂಬುದನ್ನು ಅವರು ಒತ್ತಿ ಹೇಳಿದ್ದಾರೆ. ಶಾಸಕರು ಪಕ್ಷದ ಶಿಸ್ತಿನ ಚೌಕಟ್ಟಿನೊಳಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಲು ಸಂಪೂರ್ಣ ಸ್ವಾತಂತ್ರ್ಯ ಹೊಂದಿದ್ದಾರೆ. ಆದರೆ ಅಂತಿಮವಾಗಿ ಹೈಕಮಾಂಡ್ ಆದೇಶವೇ ಶ್ರೇಷ್ಠ, ಶಾಸಕರಿಂದ ಹಿಡಿದು ತಾವು ಮತ್ತು ಶಿವಕುಮಾರ್ ಸಹ ಹೈಕಮಾಂಡ್ ಸೂಚನೆಗೆ ತಲೆಬಾಗುತ್ತೇವೆ ಎಂದು ಅವರು ತಿಳಿಸಿದ್ದಾರೆ.

ಇದಕ್ಕೆ ಪೂರಕವಾಗಿ ಗೃಹ ಸಚಿವ ಪರಮೇಶ್ವರ್ ಕೂಡ ವಿಪಕ್ಷಗಳಿಗೆ ತಿರುಗೇಟು ನೀಡಿದ್ದಾರೆ. ಸರ್ಕಾರ ನಡೆಸುವವರು ನಾವು; ಸರ್ಕಾರಕ್ಕೆ ಸಂಬಂಧಿಸಿದ ಹೆಚ್ಚಿನ ಮಾಹಿತಿ ಸಹಜವಾಗಿಯೇ ನಮ್ಮ ಬಳಿ ಇರುತ್ತದೆ ಎಂದು ಅವರು ಹೇಳಿದ್ದಾರೆ. ಫೋನ್ ಟ್ಯಾಪಿಂಗ್ ಅಥವಾ ಗೂಢಚಾರಿಕೆ ನಡೆಯುತ್ತಿದೆ ಎಂದು ವಿಪಕ್ಷದವರಿಗೆ ಯಾರು ತಿಳಿಸಿದರು ಎಂದು ಪ್ರಶ್ನಿಸಿದ ಅವರು, ಈ ಸಂಬಂಧ ಸರ್ಕಾರದ ಗಮನಕ್ಕೆ ಯಾವುದೇ ಅಧಿಕೃತ ಮಾಹಿತಿ ಬಂದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿ "ಪೊಲಿಟಿಕಲ್ ಇಂಟಲಿಜೆನ್ಸ್" ಎಂಬ ಪ್ರತ್ಯೇಕ ವಿಭಾಗವಿದೆ. ಅದರ ಮೂಲಕ ಮುಖ್ಯಮಂತ್ರಿಗೆ ಸಾಮಾನ್ಯ ರಾಜಕೀಯ ಮಾಹಿತಿಗಳು ಹೋಗುವುದು ಸಹಜ ಪ್ರಕ್ರಿಯೆ ಎಂದು ಅವರು ವಿವರಿಸಿದ್ದಾರೆ. ಯಾವ ಮಾಹಿತಿ ಮುಖ್ಯ, ಯಾವುದು ಅಗತ್ಯ ಎನ್ನುವುದು ಮುಖ್ಯಮಂತ್ರಿಯವರ ವಿವೇಚನೆಗೆ ಬಿಟ್ಟ ವಿಷಯ. ಆದರೆ ಇದನ್ನು ಫೋನ್ ಟ್ಯಾಪಿಂಗ್ ಅಥವಾ ಗೂಢಚಾರಿಕೆ ಎಂದು ಬಣ್ಣಿಸುವುದು ಸರಿಯಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಇದರಿಂದಾಗಿ ರಾಜಕೀಯ ವಲಯದಲ್ಲಿ ಮಾತಿನ ಸಮರ ತೀವ್ರಗೊಂಡಿದೆ. ಸರ್ಕಾರದ ವಿರುದ್ಧದ ಆರೋಪಗಳು ಮತ್ತು ಸರ್ಕಾರದ ಪ್ರತಿಕ್ರಿಯೆಗಳು ಪರಸ್ಪರ ಘರ್ಷಣೆಗೆ ಕಾರಣವಾಗಿವೆ. ಮುಂದಿನ ದಿನಗಳಲ್ಲಿ ಈ ವಿಚಾರ ಯಾವ ದಿಕ್ಕಿಗೆ ತಿರುಗುತ್ತದೆ, ರಾಜಕೀಯ ಸಮೀಕರಣಗಳ ಮೇಲೆ ಇದರ ಪರಿಣಾಮ ಏನು ಎನ್ನುವುದನ್ನು ಕಾದು ನೋಡಬೇಕಾಗಿದೆ.

ಲಂಚ ಪಡೆಯುವಾಗ ಭದ್ರಾವತಿ ಬಿಇಒ ಲೋಕಾ ಬಲೆಗೆ



ಶಿವಮೊಗ್ಗ: ಸರ್ಕಾರಿ ಶಿಕ್ಷಕರೊಬ್ಬರ ವಾರ್ಷಿಕ ವೇತನ ಬಡ್ತಿ ಮತ್ತು ಬಾಕಿ ಉಳಿದಿರುವ ವಿವಿಧ ಭತ್ಯೆಗಳನ್ನು ಮಂಜೂರು ಮಾಡುವ ವಿಚಾರದಲ್ಲಿ ಲಂಚಕ್ಕೆ ಬೇಡಿಕೆ ಇಟ್ಟಿದ್ದ ಭದ್ರಾವತಿ ಕ್ಷೇತ್ರ ಶಿಕ್ಷಣಾಧಿಕಾರಿ (ಬಿಇಒ) ಲೋಕಾಯುಕ್ತರ ಬಲೆಗೆ ಸಿಲುಕಿರುವ ಘಟನೆ ಶಿವಮೊಗ್ಗ ಜಿಲ್ಲೆಯಲ್ಲಿ ಬೆಳಕಿಗೆ ಬಂದಿದೆ. ಅಧಿಕಾರ ದುರುಪಯೋಗ ಮತ್ತು ಲಂಚ ಬೇಡಿಕೆಯ ಆರೋಪ ಗಂಭೀರ ಸ್ವರೂಪ ಪಡೆದುಕೊಂಡಿದ್ದು, ಈ ಪ್ರಕರಣದಲ್ಲಿ ಮಧ್ಯವರ್ತಿಯನ್ನೂ ಲೋಕಾಯುಕ್ತ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಲೋಕಾಯುಕ್ತರ ಕಾರ್ಯಾಚರಣೆಯಲ್ಲಿ ಬಂಧಿತರಾದವರನ್ನು ಭದ್ರಾವತಿ ಕ್ಷೇತ್ರ ಶಿಕ್ಷಣಾಧಿಕಾರಿ ಎ.ಕೆ. ನಾಗೇಂದ್ರಪ್ಪ ಹಾಗೂ ಮಧ್ಯವರ್ತಿ ಮಂಜುನಾಥ್ ಎಂದು ಗುರುತಿಸಲಾಗಿದೆ. ಶಿಕ್ಷಕರಾದ ಲಿಂಗರಾಜು ಅವರು 2011ರಿಂದ 2023ರವರೆಗೆ ತಮ್ಮ ಸೇವಾವಧಿಗೆ ಸಂಬಂಧಿಸಿದಂತೆ ಬರಬೇಕಿದ್ದ ವಾರ್ಷಿಕ ವೇತನ ಬಡ್ತಿ, ಪ್ರತಿ ವೇತನ ಹಾಗೂ ಇತರೆ ಸರ್ಕಾರಿ ಭತ್ಯೆಗಳನ್ನು ಮಂಜೂರು ಮಾಡುವಂತೆ ಹಲವಾರು ಬಾರಿ ಸಂಬಂಧಿತ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರು. ಆದರೆ ವರ್ಷಗಳ ಕಾಲ ಮನವಿಗಳನ್ನು ಸಲ್ಲಿಸಿದ್ದರೂ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳಲಾಗಿರಲಿಲ್ಲ ಎಂದು ತಿಳಿದುಬಂದಿದೆ.

ಲಿಂಗರಾಜು ಅವರು ತಮ್ಮ ನ್ಯಾಯಯುತ ಹಕ್ಕುಗಳನ್ನು ಪಡೆಯಲು ಕಚೇರಿಗೆ ನಿರಂತರವಾಗಿ ಅಲೆದಾಡಿ ಬೇಸರಗೊಂಡಿದ್ದರು. ಮೇಲಾಧಿಕಾರಿಗಳ ಗಮನಕ್ಕೂ ವಿಷಯ ತಂದುಕೊಟ್ಟಿದ್ದರೂ ಸಮಸ್ಯೆಗೆ ಪರಿಹಾರ ಸಿಕ್ಕಿರಲಿಲ್ಲ. ಇದೇ ಸಂದರ್ಭದಲ್ಲಿ ಇತ್ತೀಚೆಗೆ ಬಿಇಒ ಹಾಗೂ ಮಧ್ಯವರ್ತಿ ಮಂಜುನಾಥ್ ಇಬ್ಬರೂ ಸೇರಿಕೊಂಡು ಬಾಕಿ ಇರುವ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು ಮಂಜೂರು ಮಾಡುವುದಕ್ಕಾಗಿ ನಾಲ್ಕು ಲಕ್ಷ ರೂಪಾಯಿ ಲಂಚ ನೀಡುವಂತೆ ಒತ್ತಾಯಿಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಈ ಬಗ್ಗೆ ಶಿಕ್ಷಕರು ಲೋಕಾಯುಕ್ತ ಅಧಿಕಾರಿಗಳಿಗೆ ದೂರು ನೀಡಿದ್ದರು. ದೂರು ಆಧರಿಸಿ ಕಾರ್ಯಾಚರಣೆ ನಡೆಸಿದ ಲೋಕಾಯುಕ್ತ ಪೊಲೀಸರು, ಲಂಚ ಸ್ವೀಕರಿಸುತ್ತಿದ್ದ ವೇಳೆ ಬಿಇಒ ಮತ್ತು ಮಧ್ಯವರ್ತಿಯನ್ನು ಖೆಡ್ಡೆಗೆ ಬೀಳಿಸಿದ್ದಾರೆ. ಈ ಕಾರ್ಯಾಚರಣೆ ಜಿಲ್ಲೆಯ ಸರ್ಕಾರಿ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಈ ಪ್ರಕರಣವು ಶಿಕ್ಷಕರಿಗೆ ಸಲ್ಲಬೇಕಾದ ಆರ್ಥಿಕ ಹಕ್ಕುಗಳನ್ನು ಮಂಜೂರು ಮಾಡುವ ಪ್ರಕ್ರಿಯೆಯಲ್ಲೂ ಲಂಚದ ಪ್ರಭಾವ ಇದೆ ಎಂಬ ಪ್ರಶ್ನೆಗಳನ್ನು ಎಬ್ಬಿಸಿದೆ. ಪ್ರಕರಣದ ತನಿಖೆ ಮುಂದುವರಿದಿದ್ದು, ಇನ್ನಷ್ಟು ಮಾಹಿತಿ ಬಹಿರಂಗವಾಗುವ ಸಾಧ್ಯತೆ ಇದೆ. ಸರ್ಕಾರಿ ಸೇವೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆ ಕುರಿತಂತೆ ಈ ಘಟನೆ ಮತ್ತೆ ಚರ್ಚೆಗೆ ಕಾರಣವಾಗಿದೆ.

ನಿಧಾನ ಕಾರ್ ಓಡಿಸು ಎಂದಿದ್ದಕ್ಕೆ ಬರ್ಬರ ಹತ್ಯೆ

ಹಾಸನ: ನಿಧಾನವಾಗಿ ವಾಹನ ಓಡಿಸುವಂತೆ ಸಲಹೆ ನೀಡಿದ ಕಾರಣಕ್ಕೆ ಯುವಕನೊಬ್ಬನನ್ನು ಕಾರಿನಿಂದ ಗುದ್ದಿಸಿ ಹತ್ಯೆ ಮಾಡಿರುವ ದಾರುಣ ಘಟನೆ ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲೂಕಿನ ಸೂರನಹಳ್ಳಿ ಗ್ರಾಮದಲ್ಲಿ ನಡೆದಿದೆ. ಮಧ್ಯರಾತ್ರಿ ನಡೆದ ಈ ಘಟನೆ ಗ್ರಾಮದಲ್ಲಿ ಆತಂಕ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ.

ಹತ್ಯೆಯಾದ ಯುವಕನನ್ನು ಮನು (27) ಎಂದು ಗುರುತಿಸಲಾಗಿದೆ. ಮನು ತನ್ನ ಸ್ನೇಹಿತರಾದ ಅಭಿಷೇಕ್, ರಾಕೇಶ್ ಹಾಗೂ ಕುಶಾಲ್ ಜೊತೆಗೂಡಿ ನಡುರಾತ್ರಿ ಸುಮಾರು 12 ಗಂಟೆ ಸಮಯದಲ್ಲಿ ಗ್ರಾಮದ ರಸ್ತೆ ಪಕ್ಕದಲ್ಲಿ ನಿಂತು ಮಾತನಾಡುತ್ತಿದ್ದರು. ಈ ವೇಳೆ ಕೆಎ-01-ಎಂ-ಎಫ್-2883 ನೋಂದಣಿ ಸಂಖ್ಯೆಯ ಕಾರೊಂದು ಅತಿವೇಗದಲ್ಲಿ ಅವರತ್ತ ಬರುತ್ತಿರುವುದು ಕಂಡುಬಂದಿದೆ.

ಕಾರು ಅತಿಯಾಗಿ ವೇಗವಾಗಿ ಸಾಗುತ್ತಿದ್ದನ್ನು ಗಮನಿಸಿದ ಯುವಕರ ತಂಡ, ಚಾಲಕನಿಗೆ ನಿಧಾನವಾಗಿ ಹೋಗುವಂತೆ ತಿಳಿಸಿ ಎಚ್ಚರಿಕೆ ನೀಡಿದ್ದರು. ಆದರೆ ಇದರಿಂದ ಕೋಪಗೊಂಡ ಕಾರು ಚಾಲಕ ಕೆಲ ಅಂತರ ಮುಂದೆ ಹೋಗಿ ವಾಹನವನ್ನು ತಿರುಗಿಸಿಕೊಂಡು ಮತ್ತೆ ಯುವಕರತ್ತ ದೌಡಾಯಿಸಿದ್ದಾನೆ. ಯಾವುದೇ ತಡೆವಿಲ್ಲದೆ ನಿಂತಿದ್ದ ಯುವಕರ ಮೇಲೆ ಕಾರು ಹಾಯಿಸಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ಗುದ್ದಿದ ಬಳಿಕ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ.

ಡಿಕ್ಕಿಯ ತೀವ್ರತೆಗೆ ಮನು ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಅಭಿಷೇಕ್ ಸೇರಿದಂತೆ ಮೂವರು ಯುವಕರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ತಕ್ಷಣ ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅವರ ಸ್ಥಿತಿ ಕುರಿತು ವೈದ್ಯರು ಗಮನ ಹರಿಸಿದ್ದಾರೆ. ಘಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತ ಮನು ಹಾಗೂ ಗಾಯಾಳು ಯುವಕರು ಪರಸ್ಪರ ಸಂಬಂಧಿಗಳು ಎಂಬುದು ತಿಳಿದುಬಂದಿದೆ. ಪ್ರಕರಣ ಸಂಬಂಧ ಕಾರು ಚಾಲಕನ ಪತ್ತೆಗಾಗಿ ಪೊಲೀಸರು ಶೋಧ ಕಾರ್ಯಾಚರಣೆ ಆರಂಭಿಸಿದ್ದಾರೆ.

ಈ ಘಟನೆ ಗ್ರಾಮದಲ್ಲಿ ಆಕ್ರೋಶಕ್ಕೆ ಕಾರಣವಾಗಿದ್ದು, ಅತಿವೇಗ ಹಾಗೂ ಅಜಾಗರೂಕ ಚಾಲನೆಯ ಪರಿಣಾಮ ಎಂತಹ ದುರಂತಗಳಿಗೆ ದಾರಿ ಮಾಡಿಕೊಡುತ್ತದೆ ಎಂಬುದಕ್ಕೆ ಇದು ಮತ್ತೊಂದು ಉದಾಹರಣೆಯಾಗಿದೆ. ಪ್ರಕರಣದ ತನಿಖೆ ಮುಂದುವರಿದಿದ್ದು, ಆರೋಪಿಯನ್ನು ಶೀಘ್ರ ಬಂಧಿಸುವಂತೆ ಸ್ಥಳೀಯರು ಆಗ್ರಹಿಸಿದ್ದಾರೆ.

ಪೋಕ್ಸೋ ಕೇಸ್‌ನಲ್ಲಿ ಇಂದು 2 ಬೆಳವಣಿಗೆ: ಕುತೂಹಲ ಮೂಡಿಸಿದ ಮುತ್ತ್ಯಾ ನಡೆ

ಯಾದಗಿರಿ: ತಮ್ಮ ವಿರುದ್ಧ ದಾಖಲಾಗಿರುವ ಪೋಕ್ಸೋ ಪ್ರಕರಣವನ್ನು ರದ್ದುಗೊಳಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಯಾದಗಿರಿಯ ಮಹಲ್ ರೋಜಾ ಮಲ್ಲಿಕಾರ್ಜುನ ಮುತ್ತ್ಯಾ ಹೈಕೋರ್ಟ್‌ನಿಂದ ಹಿಂಪಡೆದುಕೊಂಡಿರುವುದು ಹೊಸ ತಿರುವಿಗೆ ಕಾರಣವಾಗಿದೆ. ಬಾಲಕಿ ಜತೆ ಅನುಚಿತವಾಗಿ ವರ್ತಿಸಿದರೆಂಬ ಆರೋಪದ ವಿಡಿಯೋ ವೈರಲ್ ಆದ ಬಳಿಕ ಪ್ರಕರಣ ದಾಖಲಾದ ಹಿನ್ನೆಲೆಯಲ್ಲಿ ಮುತ್ತ್ಯಾ ಕಾನೂನು ಹೋರಾಟ ಆರಂಭಿಸಿದ್ದರು. ಆದರೆ ಈಗ ಏಕಾಏಕಿ ಅರ್ಜಿ ವಾಪಸ್ ಪಡೆದಿರುವುದು ಹಲವು ಪ್ರಶ್ನೆಗಳನ್ನು ಎಬ್ಬಿಸಿದೆ.

ಹೈಕೋರ್ಟ್‌ಗೆ ಅರ್ಜಿ, ಬಳಿಕ ಹಿಂಪಡೆದ ನಿರ್ಧಾರ: ಬಾಲಕಿ ಜತೆ ಅನುಚಿತವಾಗಿ ವರ್ತಿಸಿರುವುದಾಗಿ ಹೇಳಲಾಗಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ ನಂತರ ಪ್ರಕರಣ ಗಂಭೀರ ಸ್ವರೂಪ ಪಡೆದುಕೊಂಡಿತ್ತು. ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಈ ವಿಷಯವನ್ನು ಗಮನಕ್ಕೆ ತೆಗೆದುಕೊಂಡು ಯಾದಗಿರಿ ಜಿಲ್ಲಾಧಿಕಾರಿಗೆ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿತ್ತು. ಅದರ ಬೆನ್ನಲ್ಲೇ ಪೊಲೀಸರು ಮಲ್ಲಿಕಾರ್ಜುನ ಮುತ್ತ್ಯಾ ವಿರುದ್ಧ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದರು.

ಪ್ರಕರಣ ದಾಖಲಾಗುತ್ತಿದ್ದಂತೆಯೇ ಮುತ್ತ್ಯಾ ಸಾರ್ವಜನಿಕವಾಗಿ ಕಾಣಿಸದೇ ಅಜ್ಞಾತ ಸ್ಥಳಕ್ಕೆ ತೆರಳಿದ್ದರು ಎನ್ನಲಾಗಿತ್ತು. ಇದೇ ಸಮಯದಲ್ಲಿ ತಮ್ಮ ವಕೀಲರ ಮೂಲಕ ಕಲಬುರಗಿ ಹೈಕೋರ್ಟ್‌ನಲ್ಲಿ ಪೋಕ್ಸೋ ಪ್ರಕರಣವನ್ನು ರದ್ದುಪಡಿಸುವಂತೆ ಅರ್ಜಿ ಸಲ್ಲಿಸಿದ್ದರು. ಪ್ರಕರಣ ಕಾನೂನುಬದ್ಧವಲ್ಲ, ದುರುದ್ದೇಶದಿಂದ ದಾಖಲಿಸಲಾಗಿದೆ ಎಂಬ ವಾದವನ್ನು ಅವರು ಮುಂದಿಟ್ಟಿದ್ದರು ಎಂದು ತಿಳಿದುಬಂದಿತ್ತು. ಆದರೆ ಇಂದು ಅಚಾನಕ್‌ವಾಗಿ ಅವರ ಪರ ವಕೀಲರು ಹೈಕೋರ್ಟ್‌ನಲ್ಲಿ ಸಲ್ಲಿಸಿದ್ದ ಅರ್ಜಿಯನ್ನು ವಾಪಸ್ ಪಡೆದುಕೊಂಡಿದ್ದಾರೆ. ಈ ನಿರ್ಧಾರದಿಂದ ಮುತ್ತ್ಯಾ ಮುಂದಿನ ಕಾನೂನು ಕ್ರಮಗಳ ಬಗ್ಗೆ ಊಹಾಪೋಹಗಳು ಶುರುವಾಗಿದೆ.

ಜಾಮೀನು ಅರ್ಜಿ ವಿಚಾರಣೆ ಮುಂದೂಡಿಕೆ: ಇದರ ನಡುವೆಯೇ, ಪೋಕ್ಸೋ ಪ್ರಕರಣ ಸಂಬಂಧ ಮಲ್ಲಿಕಾರ್ಜುನ ಮುತ್ತ್ಯಾ ನಿರೀಕ್ಷಣಾ ಜಾಮೀನು ಕೋರಿ ಯಾದಗಿರಿ ಜಿಲ್ಲಾ ಮತ್ತು ಪ್ರಧಾನ ಸತ್ರಾ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದರು. ಪ್ರಕರಣದ ಗಂಭೀರತೆಯನ್ನು ಉಲ್ಲೇಖಿಸಿ ಸರಕಾರದ ಪರ ವಕೀಲರು ಜಾಮೀನಿಗೆ ಆಕ್ಷೇಪಣೆ ಸಲ್ಲಿಸಿದ್ದಾರೆ. ಈ ಹಿನ್ನೆಲೆ ನ್ಯಾಯಾಲಯ ಜಾಮೀನು ಅರ್ಜಿ ವಿಚಾರಣೆಯನ್ನು ಮಾರ್ಚ್ 6ರಂದು ನಡೆಸಲು ಮುಂದೂಡಿದೆ. ಹೀಗಾಗಿ ಮುತ್ತ್ಯಾ ಕಾನೂನು ಭವಿಷ್ಯ ಈಗ ಮಾರ್ಚ್ 6ರ ವಿಚಾರಣೆಯ ಮೇಲೆ ಅವಲಂಬಿತವಾಗಿದೆ.

ಬಾಲಕಿ ಹೇಳಿಕೆ ದಾಖಲಾತಿ: ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂತ್ರಸ್ತ ಬಾಲಕಿಯ ಹೇಳಿಕೆಯನ್ನು ಶಹಾಪುರ ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶರು ದಾಖಲಿಸಿಕೊಂಡಿದ್ದಾರೆ. ಕಾನೂನು ಪ್ರಕಾರ, ಬಾಲಕಿ ನೀಡಿದ ಹೇಳಿಕೆಯನ್ನು ಮುಚ್ಚಿದ ಲಕೋಟೆಯಲ್ಲಿ ತನಿಖಾಧಿಕಾರಿಗೆ ಹಸ್ತಾಂತರಿಸಲಾಗುತ್ತದೆ. ತನಿಖೆಯ ಮುಂದಿನ ಹಂತಗಳಲ್ಲಿ ಈ ಹೇಳಿಕೆ ಪ್ರಮುಖ ಸಾಕ್ಷ್ಯವಾಗಲಿದೆ. ಬಾಲಕಿಯ ಹೇಳಿಕೆ ಮತ್ತು ತನಿಖಾ ವರದಿಗಳ ಆಧಾರದ ಮೇಲೆ ಮುಂದಿನ ಕಾನೂನು ಪ್ರಕ್ರಿಯೆ ನಿರ್ಧಾರಗೊಳ್ಳಲಿದೆ ಎಂದು ತಿಳಿದುಬಂದಿದೆ.

ಬೆಂಬಲಿಗರ ಪ್ರತಿಭಟನೆ: ಇನ್ನೊಂದೆಡೆ, ಯಾದಗಿರಿ ಹಾಗೂ ಕಲಬುರಗಿ ಜಿಲ್ಲೆಗಳ ವಿವಿಧ ಭಾಗಗಳಲ್ಲಿ ಮುತ್ತ್ಯಾ ಪರ ಬೆಂಬಲಿಗರು ಬೀದಿಗಿಳಿದು ಪ್ರತಿಭಟನೆ ನಡೆಸಿದ್ದಾರೆ. ಮುತ್ತ್ಯಾ ವಿರುದ್ಧ ದಾಖಲಾಗಿರುವ ಪೋಕ್ಸೋ ಪ್ರಕರಣವನ್ನು ರದ್ದುಗೊಳಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ. ಕೆಲವು ಧಾರ್ಮಿಕ ಹಾಗೂ ಸಮುದಾಯ ಸಂಘಟನೆಗಳೂ ಸಹ ಬೆಂಬಲ ಸೂಚಿಸಿರುವುದು ಗಮನಾರ್ಹವಾಗಿದೆ.

ಇದೇ ವೇಳೆ, ಪ್ರಕರಣದ ಕುರಿತು ಕಾಂಗ್ರೆಸ್ ಹಾಗೂ ಬಿಜೆಪಿ ಪಕ್ಷಗಳ ಕೆಲ ಪ್ರಮುಖ ನಾಯಕರು ಸಹ ಪ್ರತಿಕ್ರಿಯೆ ವ್ಯಕ್ತಪಡಿಸಿದ್ದು, ಘಟನೆಯ ಕುರಿತು ಸಂಪೂರ್ಣ ಸತ್ಯ ಬಹಿರಂಗವಾಗಬೇಕು ಎಂದು ಹೇಳಿದ್ದಾರೆ. ಪ್ರಕರಣದ ಸುತ್ತಲೂ ರಾಜಕೀಯ ಚರ್ಚೆಯೂ ಪ್ರಾರಂಭವಾಗಿರುವುದು ಸ್ಪಷ್ಟವಾಗಿದೆ.

ಒಟ್ಟಾರೆ, ಹೈಕೋರ್ಟ್‌ನಿಂದ ಅರ್ಜಿ ಹಿಂಪಡೆದಿರುವುದು, ಜಾಮೀನು ವಿಚಾರಣೆ ಮುಂದೂಡಿಕೆಯಾಗಿರುವುದು ಹಾಗೂ ಬಾಲಕಿ ಹೇಳಿಕೆ ದಾಖಲಾತಿ ಸೇರಿ ಪ್ರಕರಣಕ್ಕೆ ಹೊಸ ಗಂಭೀರತೆ ನೀಡಿವೆ. ಮುಂದಿನ ದಿನಗಳಲ್ಲಿ ನ್ಯಾಯಾಲಯದ ತೀರ್ಮಾನ ಹಾಗೂ ತನಿಖೆಯ ದಿಕ್ಕು ಈ ಪ್ರಕರಣದ ಮುಂದಿನ ಪಥವನ್ನು ನಿರ್ಧರಿಸಲಿದೆ.

ಮನುಷ್ಯನ ಶ್ರೇಷ್ಠತೆಯ ವ್ಯಸನಕ್ಕೆ ತಮ್ಮ ಅನುಭಾವದ ಮೂಲಕ ಮದ್ದು ಅರೆದವರು ಕೈವಾರ ತಾತಯ್ಯ: ಕೆ.ವಿ.ಪ್ರಭಾಕರ್

ಕೋಲಾರ: ಮನುಷ್ಯನ ಶ್ರೇಷ್ಠತೆಯ ವ್ಯಸನಕ್ಕೆ ತಮ್ಮ ಅನುಭಾವದ ಮೂಲಕ ಮದ್ದು ಅರೆದವರು ಕೈವಾರ ತಾತಯ್ಯ ಅವರು, ಆದ್ಯಾತ್ಮ ಅಂದರೆ ಚರ್ಮಶುದ್ಧಿ ಅಲ್ಲ: ಅಂತರಂಗದ ಶುದ್ಧಿ ಎಂದು ಬದುಕಿ ತೋರಿಸಿದವರು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಅಭಿಪ್ರಾಯಪಟ್ಟರು.

ಕೈವಾರ ತಾತಯ್ಯ ಅವರ 300ನೇ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಜಾತಿ, ಧರ್ಮ, ಲಿಂಗ ಹಣ, ಅಂತಸ್ತು ಎಲ್ಲದರ ಶ್ರೇಷ್ಠತೆಯ ವ್ಯಸನವನ್ನು ನಿವಾಳಿಸಿದ ಕೈವಾರದ ಶ್ರೀ ಯೋಗಿ ನಾರೇಯಣ ಯತೀಂದ್ರರು "ತಾತಯ್ಯ" ಅಂತಲೇ ಜನಮಾನಸದಲ್ಲಿ ನೆಲೆಯಾಗಿದ್ದಾರೆ.

ಆಧ್ಯಾತ್ಮ ಎಂದರೆ ಬಹಳ ಕಠಿಣ, ಎಲ್ಲರ ಪಾಲಿನ ಪ್ರಸಾದ ಅಲ್ಲ ಎನ್ನುವ ಶ್ರೇಷ್ಠತೆಯನ್ನು ಅಳಿಸಿ, "ಕಠಿಣವಾದ ಅಧ್ಯಾತ್ಮದ ಸಾರವನ್ನು ಸರಳ ಭಾಷೆಯಲ್ಲಿ ಸಮಾಜದ ಕಟ್ಟ ಕಡೆಯವರಿಗೂ ತಲುಪಿಸಿದ ಸಂತ ಶ್ರೇಷ್ಠರು ತಾತಯ್ಯ ಎಂದರು.

ಕರ್ನಾಟಕದ ಶ್ರೇಷ್ಠ ಸಂತರು ದಾರ್ಶನಿಕರು ಮತ್ತು ಸಮಾಜ ಸುಧಾರಕರಲ್ಲಿ ಒಬ್ಬರಾದ ತಾತಯ್ಯ ತೆಲುಗು ಮತ್ತು ಕನ್ನಡ ಎರಡೂ ಭಾಷೆಗಳಲ್ಲಿ ತಮ್ಮ ಅನುಭಾವವನ್ನೇ ತತ್ವಪದಗಳನ್ನಾಗಿ ರಚಿಸಿ ಹಾಡಿದರು.

ಜನಸಾಮಾನ್ಯರಿಗೆ ಅಧ್ಯಾತ್ಮದ ದಾರಿಯನ್ನು ತೋರಿಸಿದ ಸೂಫಿಗಳು, ಸಂತರ ಪರಂಪರೆಯನ್ನು ಮುಂದುವರೆಸಿದರು. ಅಧ್ಯಾತ್ಮ ಅಂದರೆ ಚರ್ಮ ಶುದ್ಧಿಯ ಸಂಪ್ರದಾಯವಲ್ಲ, ಅಂತರಂಗ ಶುದ್ಧಿಯ ಹಾದಿ ಎನ್ನುವುದನ್ನು ಬದುಕಿ ತೋರಿಸಿದರು ಎಂದು ವಿವರಿಸಿದರು.

ಮನುಷ್ಯ ನಿರ್ಮಿಸಿದ ಎಲ್ಲವೂ ಕಡೆ ಗಾಲಕ್ಕೆ ಕೇಡುಗಾಲಕ್ಕೆ ಜಾರುವ ನೈತಿಕ ಅವನತಿಯನ್ನು ತಾತಯ್ಯ 300 ವರ್ಷಗಳ ಹಿಂದೆಯೇ ಹಾಡಿ ಮನುಕುಲವನ್ನು ಎಚ್ಚರಿಸಿದರು.

ಈ ಕಾರಣಕ್ಕೇ ತಾತಯ್ಯ ಬರೆದಿರುವ 'ಕಾಲಜ್ಞಾನ' ಇಂದಿಗೂ ಪ್ರಸ್ತುತವಾಗಿದೆ ಎಂದರು.

ಮಾನವೀಯತೆ ಮತ್ತು ಭಕ್ತಿಯೇ ಮುಕ್ತಿಗೆ ದಾರಿ ಎಂದು ಬೋಧಿಸಿ,

ತಾತಯ್ಯ ಬರೆದ 'ಕಾಲಜ್ಞಾನ' ಕೇವಲ ಭವಿಷ್ಯವಾಣಿಯಲ್ಲ, ಅದು ಅಧ್ಯಾತ್ಮ ಮತ್ತು ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಒಂದು ದರ್ಶನ ಎಂದರು.

ಇವತ್ತಿನ ಮನುಷ್ಯನ ನೈತಿಕ ಅವನತಿಯನ್ನು, ನಡವಳಿಕೆ ಹೇಗೆ ಬದಲಾಗುತ್ತದೆ ಎಂಬುದನ್ನು 250 ವರ್ಷಗಳ ಹಿಂದೆಯೇ ವಿವರಿಸಿದ್ದಾರೆ.

ಶ್ರೇಷ್ಠತೆಯ ವ್ಯಸನ ಮತ್ತು ದ್ವೇಷ, ಸಣ್ಣತನಗಳಿಂದ ಮನುಷ್ಯ ಧರ್ಮವನ್ನು ಬಿಟ್ಟು ಅಧರ್ಮದ ಹಾದಿ ಹಿಡಿಯುತ್ತಾನೆ. ಸತ್ಯಕ್ಕೆ ಬೆಲೆ ಇಲ್ಲದಂತಾಗುತ್ತದೆ. ತಂದೆ-ತಾಯಿ ಮತ್ತು ಮಕ್ಕಳ ನಡುವಿನ ಗೌರವ ಕಡಿಮೆಯಾಗುತ್ತದೆ. ಗುರು-ಶಿಷ್ಯರ ಸಂಬಂಧ ಕೇವಲ ವ್ಯವಹಾರವಾಗುತ್ತದೆ. ಮನುಷ್ಯ ಹಣಕ್ಕಾಗಿ ಏನು ಬೇಕಾದರೂ ಮಾಡಲು ಸಿದ್ಧನಾಗುತ್ತಾನೆ, ಹಸಿವು ಮತ್ತು ಬಡತನ ಹೆಚ್ಚಾದರೂ ಶ್ರೀಮಂತರು ಉದಾರಿಗಳಾಗುವುದಿಲ್ಲ ಎನ್ನುವ ಇವತ್ತಿನ ಸತ್ಯವನ್ನು ಆವತ್ತೇ ದಾಖಲಿಸಿದ್ದಾರೆ ಎಂದರು.

ಪ್ರಕೃತಿಯ ಮೇಲೆ ಮನುಷ್ಯನ ದಬ್ಬಾಳಿಕೆಯಿಂದ ಆಗುವ ಅನಾಹುತಗಳಿಗೆ 250 ವರ್ಷಗಳ ಹಿಂದೆಯೇ ಕನ್ನಡಿ ಹಿಡಿದಿದ್ದಾರೆ.

ಅಕಾಲಿಕ ಮಳೆ ಮತ್ತು ಭೀಕರ ಬರಗಾಲ, ಭೂಕಂಪಗಳು ಮತ್ತು ಜಲಪ್ರಳಯದಂತಹ ನೈಸರ್ಗಿಕ ವಿಕೋಪಗಳು ಸಂಭವಿಸುತ್ತವೆ.

ಗಾಳಿ ಮತ್ತು ನೀರು ವಿಷಪೂರಿತವಾಗಿ ಹರಡುವ ರೋಗಗಳ ಬಗ್ಗೆಯೂ ಆವತ್ತೇ ಎಚ್ಚರಿಸಿದ್ದಾರೆ.

ತಮ್ಮ ಅಧ್ಯಾತ್ಮ ಮತ್ತು ತತ್ವ ಪದಗಳ ಮೂಲಕ ಬ್ರಿಟೀಷರ ವಿರುದ್ಧದ ಹೋರಾಟಕ್ಕೂ ಸ್ಫೂರ್ತಿಯಾಗಿದ್ದ ತಾತಯ್ಯ, ರಾಜಕೀಯ ಮತ್ತು ಆಡಳಿತಗಾರರು ಪ್ರಜೆಗಳ ಹಿತ ಮರೆತು ಸ್ವಾರ್ಥಿಗಳಾಗುತ್ತಾರೆ. ನ್ಯಾಯಾಲಯಗಳಲ್ಲಿ ನ್ಯಾಯ ಸಿಗುವುದು ಕಷ್ಟವಾಗುತ್ತದೆ. ಗಡಿಗಳಲ್ಲಿ ಯುದ್ಧದ ಭೀತಿ ಮತ್ತು ಅಶಾಂತಿ ನೆಲೆಸುತ್ತದೆ ಎನ್ನುವ ಭವಿಷ್ಯವಾಣಿಯನ್ನೂ ದಾಖಲಿಸಿದ್ದಾರೆ.

•ತಾತಯ್ಯನವರು ವಿಜ್ಞಾನದ ಬೆಳವಣಿಗೆಯನ್ನು "ಕಬ್ಬಿಣದ ಕುದುರೆಗಳು ಓಡುತ್ತವೆ", "ಆಕಾಶದಲ್ಲಿ ಪಕ್ಷಿಗಳಂತೆ ಮನುಷ್ಯ ಹಾರುತ್ತಾನೆ" ಎಂಬ ರೂಪಕಗಳ ಮೂಲಕ ವರ್ಣಿಸಿದ್ದರು. ಇಂದು ನಾವು ಬಳಸುವ ರೈಲು ಮತ್ತು ವಿಮಾನಗಳನ್ನು ಅವರು ಅಂದೇ ಊಹಿಸಿದ್ದರು.

ತಾತಯ್ಯನವರ ಕಾಲಜ್ಞಾನದ ಮೂಲ ಸಂದೇಶ: ತಾತಯ್ಯನವರು ಕೇವಲ ಭಯ ಹುಟ್ಟಿಸಲು ಕಾಲಜ್ಞಾನ ಬರೆಯಲಿಲ್ಲ. "ಕಾಲ ಬದಲಾದರೂ ಮನುಷ್ಯ ತನ್ನ ಅಂತರಾತ್ಮವನ್ನು ಶುದ್ಧವಾಗಿಟ್ಟುಕೊಂಡು, ಭಕ್ತಿಯ ಹಾದಿಯಲ್ಲಿ ನಡೆದರೆ ಎಂತಹ ಕಠಿಣ ಕಾಲವನ್ನೂ ಸುಲಭವಾಗಿ ದಾಟಬಹುದು ಎನ್ನುವ ಸಂದೇಶ ನೀಡಿದ್ದಾರೆ" ಎಂದು ವಿವರಿಸಿದರು.

"ಮನವ ನಿಲಿಸುವುದು ಬಲು ಕಷ್ಟವೋ" ಎಂಬ ಮಾತಿನಂತೆ, ಮನಸ್ಸನ್ನು ಹತೋಟಿಯಲ್ಲಿಟ್ಟುಕೊಂಡು ಸನ್ಮಾರ್ಗದಲ್ಲಿ ನಡೆಯುವುದೇ ಕಾಲಜ್ಞಾನದ ಸಾರ.

ಕೈವಾರ ತಾತಯ್ಯನವರ ಪದಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದರು.

ಸಂಸದರಾದ ಮಲ್ಲೇಶ್, ಎಡಿಜಿಪಿ ದೇವರಾಜ್ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

ಬಾಂಬ್ ಸ್ಫೋಟಿಸುವುದಾಗಿ ಪ್ರಚೋದನಕಾರಿ ಪೋಸ್ಟ್, ಕೇಸ್ ದಾಖಲು

ಮಂಗಳೂರು:ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲ ಪ್ರದೇಶದ ಮಸೀದಿ ಬಳಿ ಬಾಂಬ್ ಸ್ಫೋಟ ಮಾಡುವುದಾಗಿ ಸಾಮಾಜಿಕ ಜಾಲತಾಣದಲ್ಲಿ ಪ್ರಚೋದನಕಾರಿ ಪೋಸ್ಟ್ ಮಾಡಿರುವ ಘಟನೆಗೆ ಸಂಬಂಧಿಸಿ ಉಳ್ಳಾಲ ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿದ್ದಾರೆ. ಪೋಸ್ಟ್ ಮಾಡಿದ ಕಿಡಿಗೇಡಿಗಾಗಿ ಶೋಧ ಕಾರ್ಯಾಚರಣೆ ಆರಂಭಿಸಲಾಗಿದೆ. 'ಉಳ್ಳಾಲದ ಮಸೀದಿ ಬಳಿ ಬಾಂಬ್ ಸ್ಫೋಟಿಸುತ್ತೇನೆ, ಸಪೋರ್ಟ್ ಮಾಡಿ' ಎಂದು ಶಂಕರ್11916 ಎಂಬ ಇನ್‌ಸ್ಟಾಗ್ರಾಂ ಖಾತೆಯಿಂದ ಪೋಸ್ಟ್ ಮಾಡಲಾಗಿತ್ತು. ಈ ಕಮೆಂಟ್ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ.

ಹಿಂದೂ ಸಂಘಟನೆ ಕಾರ್ಯಕರ್ತನಾಗಿ ಗುರುತಿಸಿಕೊಂಡು ಕೊಲೆಯಾಗಿದ್ದ ಸುಹಾಸ್ ಶೆಟ್ಟಿ ಅವರ ಭಾವಚಿತ್ರ ಹೊಂದಿದ್ದ ಇನ್‌ಸ್ಟಾಗ್ರಾಂ ಪೇಜ್‌ನಲ್ಲಿ ಪೋಸ್ಟ್ ಮಾಡಲಾಗಿದೆ ಎನ್ನಲಾಗಿದೆ. ಇದರಿಂದಾಗಿ ಪರಿಸ್ಥಿತಿ ಗಂಭೀರವಾಗುವ ಸಾಧ್ಯತೆ ಇದ್ದ ಹಿನ್ನೆಲೆಯಲ್ಲಿ ಪೊಲೀಸರು ತಕ್ಷಣ ಕ್ರಮ ಕೈಗೊಂಡಿದ್ದಾರೆ.

ಘಟನೆ ಕುರಿತು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿರುವ ಉಳ್ಳಾಲ ಪೊಲೀಸರು, ಕಮೆಂಟ್ ಹಾಕಿದ ವ್ಯಕ್ತಿಯನ್ನು ಪತ್ತೆಹಚ್ಚಿ ಬಂಧಿಸಲು ಶೋಧ ನಡೆಸುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳ ಮೂಲಕ ಧಾರ್ಮಿಕ ದ್ವೇಷ ಹುಟ್ಟಿಸುವ, ಭಯ

ಹುಟ್ಟಿಸುವ ರೀತಿಯ ಪೋಸ್ಟ್‌ಗಳಿಗೆ ಕಡಿವಾಣ ಹಾಕಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಯನ್ನು ತಕ್ಷಣ ಬಂಧಿಸುವಂತೆ ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್ ರೆಡ್ಡಿ ಸೂಚನೆ ನೀಡಿದ್ದಾರೆ. ಸಾರ್ವಜನಿಕರು ಸಾಮಾಜಿಕ ಜಾಲತಾಣಗಳಲ್ಲಿ ಜವಾಬ್ದಾರಿಯುತವಾಗಿ ವರ್ತಿಸಬೇಕು, ಪ್ರಚೋದನಕಾರಿ ಅಥವಾ ಭಯ ಹುಟ್ಟಿಸುವ ರೀತಿಯ ಪೋಸ್ಟ್‌ಗಳನ್ನು ಹಂಚಿಕೊಳ್ಳಬಾರದು ಎಂದು ಪೊಲೀಸ್ ಇಲಾಖೆ ಮನವಿ ಮಾಡಿದೆ.

ಮಂಗಳೂರಿನಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಪೋಸ್ಟ್‌ಗಳನ್ನು ಮಾಡಿದ ಪ್ರಕರಣಗಳು ಇತ್ತೀಚೆಗೆ ಕೆಲವು ನಡೆದಿದ್ದು, ಪೊಲೀಸರು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದ್ದಾರೆ. ಇತ್ತೀಚೆಗಷ್ಟೇ ಮಂಗಳೂರಿನ ಕದ್ರಿ ಮಂಜುನಾಥೇಶ್ವರ ದೇವಸ್ಥಾನಕ್ಕೆ ಸಂಬಂಧಿಸಿದಂತೆ ಆಕ್ಷೇಪಾರ್ಹ ಪೋಸ್ಟ್ ಹಾಕಿದ್ದ ವ್ಯಕ್ತಿಯನ್ನು ಸೈಬರ್ ಕ್ರೈಂ ಪೊಲೀಸರು ಕ್ಷಿಪ್ರ ಕಾರ್ಯಾಚರಣೆ ನಡೆಸಿ ಬಂಧಿಸಿದ್ದರು. ಅದೇ ರೀತಿ, ನಗರದ ಶಾಂತಿಗೆ ಭಂಗ ತರುವ ರೀತಿಯಲ್ಲಿ ಇನ್‌ಸ್ಟಾಗ್ರಾಂ ರೀಲ್ಸ್ ಮಾಡಿ, ನಿರ್ದಿಷ್ಟ ಸಮುದಾಯವನ್ನು ಗುರಿಯಾಗಿಸಿಕೊಂಡು ಅವಹೇಳನಕಾರಿ ಶಬ್ದ ಬಳಸಿ ಪೋಸ್ಟ್ ಮಾಡಿದ್ದ ಗುಂಪಿನ ವಿರುದ್ಧ ಕೆಲವು ತಿಂಗಳ ಹಿಂದೆ ನಗರ ಪೊಲೀಸ್ ಆಯುಕ್ತರು ಗೂಂಡಾ ಕಾಯ್ದೆಯಡಿ ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದ್ದರು.

ಮಂಗಳೂರು ನಗರ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಸೂಕ್ಷ್ಮತೆಯನ್ನು ಗಮನದಲ್ಲಿಟ್ಟುಕೊಂಡು, ಸೈಬರ್ ಪೊಲೀಸರು ಪ್ರತ್ಯೇಕ 'ಸೋಶಿಯಲ್ ಮೀಡಿಯಾ ಮಾನಿಟರಿಂಗ್ ಸೆಲ್' ಮೂಲಕ ನಿರಂತರ ನಿಗಾ ಇರಿಸಿದ್ದಾರೆ. ಕೇವಲ ಪೋಸ್ಟ್ ಮಾಡಿದವರಷ್ಟೇ ಅಲ್ಲದೆ, ಅಂತಹ ಪೋಸ್ಟ್‌ಗಳನ್ನು ಲೈಕ್ ಮಾಡುವ, ಶೇರ್ ಮಾಡುವ ಅಥವಾ ಪ್ರಚೋದನಕಾರಿ ಕಮೆಂಟ್ ಹಾಕುವವರ ವಿರುದ್ಧವೂ ಐಟಿ ಕಾಯ್ದೆ ಹಾಗೂ ಬಿಎಸ್‌ಎಸ್ ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ.

RAJARATHA CYBER
All Online Services Under One Roof!
• Aadhaar, PAN Card, Voter ID, Ration Card
• e-Khata, Senior Citizen Card
& Other Government Services
• Address: Junior College Road, Nelamangala
Contact: 9886926812 for medicts

ಮೊಬೈಲ್ ಕ್ಯಾಂಟೀನ್ ಸಹಾಯಧನಕ್ಕೆ ಅರ್ಜಿ ಆಹ್ವಾನ

ಪ್ರವಾಸೋದ್ಯಮ ಇಲಾಖೆ ವತಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು Enterprenuership (EP) ವಿಷಯದ ಬಗ್ಗೆ ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ನಡೆಸಲು ಸಹಾಯಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸದರಿ ತರಬೇತಿಯನ್ನು ವಸತಿ ಸಹಿತ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳ ಮೂಲಕ ಕಾರ್ಯಕ್ರಮವನ್ನು ಜಾರಿಗೊಳಿಸಲು ಸಹ ಉದ್ದೇಶಿಸಲಾಗಿರುತ್ತದೆ.

ಅರ್ಜಿದಾರರ ಅರ್ಹತೆಗಳು ಮತ್ತು ಸಲ್ಲಿಸಬೇಕಾದ ದಾಖಲೆಗಳು

1. ಅರ್ಜಿದಾರರು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು.
2. ಅರ್ಜಿದಾರರ ವಯಸ್ಸು 20 ರಿಂದ 55 ವರ್ಷದೊಳಗಿರಬೇಕು.
3. ಅರ್ಜಿದಾರರು 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.
4. ನಗರ ಪ್ರದೇಶದ ಫಲಾನುಭವಿಗಳ ವಾರ್ಷಿಕ ಆದಾಯ ರೂ.2.00 ಲಕ್ಷ ಮೀರಬಾರದು.
5. ಗ್ರಾಮಾಂತರ ಪ್ರದೇಶದ ಫಲಾನುಭವಿಗಳ ವಾರ್ಷಿಕ ಆದಾಯ ರೂ.1.50 ಲಕ್ಷ ಮೀರಬಾರದು.
6. ಅರ್ಜಿದಾರರು ಯಾವ ಜಿಲ್ಲೆಯ ನಿವಾಸಿಯಾಗಿರುತ್ತಾರೋ ಅದೇ ಜಿಲ್ಲೆಯಲ್ಲಿ ಅರ್ಜಿ ಸಲ್ಲಿಸಬೇಕು.
7. ಆಧಾರ್ ಕಾರ್ಡ್ ಪ್ರತಿಯನ್ನು ಸಲ್ಲಿಸುವುದು ಕಡ್ಡಾಯವಾಗಿದೆ.
8. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿರುವ ಬಗ್ಗೆ ತಹಶೀಲ್ದಾರ್ ಅವರಿಂದ ಪಡೆದುಕೊಂಡಿರುವ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಮತ್ತು ಆದಾರ ಪತ್ರದ ಪ್ರತಿ.
9. ಚಾಲ್ತಿಯಲ್ಲಿರುವ ಲಘುವಾಹನ ಚಾಲನ ಪರವಾನಿಗೆ ಜೆರಾಕ್ಸ್ ಪ್ರತಿ.
10. ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿರುವ ಅಂಕಪಟ್ಟಿಯ ಜೆರಾಕ್ಸ್ ಪ್ರತಿ.
11. ಯಾವುದೇ ಸರ್ಕಾರಿ ಇಲಾಖೆ/ನಿಗಮ/ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿ ಸೇವೆ ಸಲ್ಲಿಸುತ್ತಿಲ್ಲವೆಂದು ಮತ್ತು ಮೊಬೈಲ್ ಕ್ಯಾಂಟೀನ್ ಫಲಾನುಭವಿಯಾಗಿ ಆಯ್ಕೆಯಾದ ಬಳಿಕ ಪ್ರವಾಸೋದ್ಯಮ 'ಇಲಾಖೆಯಿಂದ ನೀಡುವ ಕೌಶಲ್ಯಾಭಿವೃದ್ಧಿ Enterprenuership (EP) ತರಬೇತಿಯನ್ನು ಕಡ್ಡಾಯವಾಗಿ ಪಡೆಯುತ್ತೇನೆ. ರೂ. 100/- ಬೆಲೆಯ ಛಾಪಾ ಕಾಗದದ Affidavit ನಮೂನೆಯಲ್ಲಿ ಪ್ರಮಾಣ ಪತ್ರ ಸಲ್ಲಿಸುವುದು.
12. ಅರ್ಜಿದಾರರು ಖಾತೆ ಹೊಂದಿದ ಬ್ಯಾಂಕ್ ನಿಂದ ಸಾಲ ಮಂಜೂರಾತಿ ದೃಢೀಕರಣ ಪತ್ರ ಪಡೆದು ಜೆರಾಕ್ಸ್ ಪ್ರತಿ ಲಗತ್ತಿಸುವುದು.
13. ಅರ್ಜಿದಾರರು ವಾಸಸ್ಥಳ ದೃಢೀಕರಣದ ಜೆರಾಕ್ಸ್ ಪ್ರತಿ.
14. ಅರ್ಜಿದಾರರು ಮೇಲಿನ ಎಲ್ಲಾ ದಾಖಲಾತಿಗಳನ್ನು ಸ್ವಯಂ ದೃಢೀಕರಿಸಿ ಮುಚ್ಚಿದ ಲಕೋಟೆಯಲ್ಲಿ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು.

ಆಸಕ್ತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 2026 ರ ಮಾರ್ಚ್. 13 ರೊಳಗೆ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ನಂ.09, ನೆಲಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ ಗ್ರಾಮ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110 ಕಛೇರಿ ಸಮಯದಲ್ಲಿ ಅರ್ಜಿಗಳನ್ನು ಸಲ್ಲಿಸಲು ಬಹುದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

E-TECH ENTERPRISES
All Types of Electrical & Electronics Home Appliances Services
Mob : 6363497486
Apex Plaza K.S.R.T.C Layout, Rayan Nagar, Nelamangala-562123.
Magic Needle
LADIES TAILOR
All Types of Blouse & Chudidar Stitch Here
Mob : 9606251511

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.